ನಮ್ಮ ಜನ
NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 68 ಶೀರ್ಷಿಕೆ ಕೋಡ್: ಕೆಎಆರ್ ಕೆಎನ್ 28269 ಚಿತ್ರದುರ್ಗ ದಿನಾಂಕ: 13–09–2023 ಬುಧವಾರ ಪುಟ: 4 ಬೆಲೆ : ರೂ.2–00
Volume - 01 Issue - 68 Title- Code: KARKAN 28269 Chitradurga Date: 13-09-2023 Wednesday Page: 4 Price: Rs. 2-00

ಒಳಪುಟದ ಸುದ್ದಿಗಳು
108 ಚಾಲಕ ಹಾಗೂ ಸ್ಟಾಫ್ ನರ್ಸ್ ಅಮಾನತ್ತಿಗೆ ಒತ್ತಾಯಿಸಿ ಕರುನಾಡ ವಿಜಯಸೇನೆ ಪ್ರತಿಭಟನೆ 2
ಕುರಿಕಾಯುವ ಯೋಗೇಶಗೆ ಒಲಿದು ಬಂದ ಶಿಕ್ಷಣ ಭಾಗ್ಯ 3
ಪಿಒಪಿ ಗಣೇಶ ಬಳಕೆ ಬಗ್ಗೆ ನಿಗಾ ವಹಿಸಲು ತಂಡ ರಚನೆ: ದಿವ್ಯಪ್ರಭು 4
ಸುದ್ದಿ, ಜಾಹಿರಾತಿಗೆ 9686622252

ಫಾಸ್ಟ್ ನ್ಯೂಸ್

ಅಧಿಕಾರಕ್ಕೆ ಬಂದ 3 ತಿಂಗಳಲ್ಲೇ ಕಾಂಗ್ರೆಸ್ ಜನ ವಿರೋಧಿ ಸರ್ಕಾರ: ಡಿ.ವಿ.ಸದಾನಂದಗೌಡ

ಬೆಂಗಳೂರು ನಗರದಲ್ಲಿ ಆಪರೇಷನ್ ಹಸ್ತ ವಿಚಾರಕ್ಕೆ ಸಂಬಂಧಿಸಿ ಹತಾಶೆಯಲ್ಲಿ ನಾಯಕರು ಇಂತಹ ಪ್ರಯತ್ನಕ್ಕೆ ಕೈಹಾಕುತ್ತಾರೆ ಎಂದು ಬೆಂಗಳೂರಿನಲ್ಲಿ ಬಿಜೆಪಿ ಸಂಸದ ಡಿ.ವಿ.ಸದಾನಂದಗೌಡ ತಿಳಿದರು. ಅಧಿಕಾರಕ್ಕೆ ಬಂದ 3 ತಿಂಗಳಲ್ಲೇ ಜನ ವಿರೋಧಿ ಸರ್ಕಾರವಾಗಿದೆ. ರಾಯರೆಡ್ಡಿ ಸೇರಿ ಅನೇಕರು ಸಿದ್ದರಾಮಯ್ಯ ವಿರುದ್ಧ ಮಾತಾಡ್ತಿದ್ದಾರೆ .

ಬಿಬಿಎಂಪಿ ಮಾಜಿ ಸದಸ್ಯರ ಆಪರೇಷನ್ ಹಸ್ತ ಬಹುತೇಕ ಸಕ್ಸಸ್

ಆರ್.ಅಶೋಕ್ ಕ್ಷೇತ್ರದಲ್ಲಿಯೇ ಡಿಕೆ ಬ್ರದರ್ಸ್ ಮೇಜರ್ ಸರ್ಜರಿಗೆ ಮುಂದಾಗಿದ್ದು ಬಿಬಿಎಂಪಿ ಮಾಜಿ ಸದಸ್ಯರ ಆಪರೇಷನ್ ಹಸ್ತ ಬಹುತೇಕ ಸಕ್ಸಸ್ ಆದಂತಿದೆ. ಬಿಜೆಪಿ ಮಾಜಿ ಕಾರ್ಪೋರೇಟರ್ ಗಳು ಕಾಂಗ್ರೆಸ್ ಸೇರ್ಪಡೆ ಸಾಧ್ಯತೆ. ಬಿಜೆಪಿ ಶಾಸಕ ಅಶೋಕ್ ಆಪ್ತರಾಗಿರುವ 5ಕ್ಕೂ ಹೆಚ್ಚು ಮಾಜಿ ಕಾರ್ಪೋರೇಟರ್‌ಗಳು ಕಾಂಗ್ರೆಸ್ ಸೇರುವ ಸಾಧ್ಯತೆ ಇದೆ. ಸೆಪ್ಟೆಂಬರ್ 15ರ ಬೆಳಗ್ಗೆ 10 ಗಂಟೆಗೆ ಕಾಂಗ್ರೆಸ್ ಸೇರುವ ಸಾಧ್ಯತೆ ಇದೆ.

ವಿವಿಧ ಬೇಡಿಕೆ ಈಡೇರಿಸುವಂತೆ ಕಲ್ಲು ಕ್ವಾರಿ ಕಾರ್ಮಿಕರಿಂದ ಡಿಸಿ ಕಚೇರಿ ಎದುರು ಪ್ರತಿಭಟನೆ

» ಚಿತ್ರದುರ್ಗ

ಕಟ್ಟಡ ಕಟ್ಟುವ ಕಲ್ಲು ಒಡೆಯುವ ಕ್ವಾರಿ ಕಾರ್ಮಿಕರ ಬೇಡಿಕೆಗಳನ್ನು ಈಡೇರಿಸುವಂತೆ ಎ.ಐ.ಟಿ.ಯು.ಸಿ. ವತಿಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಮಂಗಳವಾರ ಪ್ರತಿಭಟನೆ ನಡೆಸಿ ಜಿಲ್ಲಾಡಳಿತದ ಮೂಲಕ ಕಾರ್ಮಿಕ ಸಚಿವ ಹಾಗೂ ಕಾರ್ಮಿಕ ಕಲ್ಯಾಣ ಮಂಡಳಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗೆ ಮನವಿ ಸಲ್ಲಿಸಲಾಯಿತು.

ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ಎ.ಐ.ಟಿ.ಯು.ಸಿ.ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕಾಂ.ಜಿ.ಸಿ.ಸುರೇಶ್‌ಬಾಬು ಎಲ್ಲಾ ಬಗೆಯ ಕಟ್ಟಡಗಳನ್ನು ಕಟ್ಟಿ ದೇಶ ನಿರ್ಮಾಣ ಮಾಡುವವರು ಕಾರ್ಮಿಕರು. ದೇಶದಲ್ಲಿ 80 ಕೋಟಿಯಷ್ಟು ಅಸಂಘಟಿತ ಕಟ್ಟಡ ಕಾರ್ಮಿಕರಿದ್ದಾರೆ. ಹಿಂದಿನ ಬಿಜೆಪಿ.ಸರ್ಕಾರ ಕಾರ್ಮಿಕರಿಗಾಗಿಯೇ ಮೀಸಲಿಡಲಾಗಿದ್ದ ಸಾವಿರಾರುಕೋಟಿರೂ. ಗಳನ್ನು ಗುಳುಂ ಮಾಡಿದೆ. ನೊಂದಾಯಿತ ಕಟ್ಟಡ ಕಾರ್ಮಿಕರ ಮಕ್ಕಳಿಗೆ 2022–23 ನೇ ಸಾಲಿಗೆ ಶೈಕ್ಷಣಿಕ ಧನ ಸಹಾಯವನ್ನು

ಕೂಡಲೆ ಬಿಡುಗಡೆಗೊಳಿಸಬೇಕು. ಮನೆ ನಿರ್ಮಿಸಿಕೊಳ್ಳಲು ನಿವೇಶನ ಖರೀಧಿ ಮತ್ತು ಮನೆ ಕಟ್ಟಿಕೊಳ್ಳಲು ಐದು ಲಕ್ಷ ರೂ.ಗಳ ಬದಲಿಗೆ ಹತ್ತು ಲಕ್ಷ ರೂ.ಗಳನ್ನು ಫಲಾನುಭವಿ ಖಾತೆಗೆ ಜಮ ಮಾಡಬೇಕು ಎಂದು ಒತ್ತಾಯಿಸಿದರು.

ಎ.ಐ.ಟಿ.ಯು.ಸಿ. ಗೌರವಾಧ್ಯಕ್ಷ ಕಾಂ.ಟಿ.ಆರ್.ಉಮಾಪತಿ ಮಾತನಾಡುತ್ತ ನೊಂದಾಯಿತ ಕಟ್ಟಡ ಕಾರ್ಮಿಕರ ನೊಂದಣಿ ಕಾರ್ಡ್ ಪ್ರತಿ ಒಂದು ವರ್ಷಕ್ಕೆ ರಿನೀವಲ್ ಮಾರ್ಪಾಡಾಗಿದ್ದು, ಮೊದಲಿನಂತೆ ಮೂರು ವರ್ಷಕ್ಕೊಮ್ಮೆ ರಿನೀವಲ್‌ಗೊಳಿಸಬೇಕು. ಕಾರ್ಮಿಕರ ವಿವಾಹ, ಹೆರಿಗೆ, ನಿವೃತ್ತಿ ಪಿಂಚಣಿ, ಅಪಘಾತ ಪರಿಹಾರ, ಸ್ವಾಭಾವಿಕ ಮರಣ ಇನ್ನು ಹಲವಾರು ಅರ್ಜಿಗಳು ವಿಳಂಭವಾಗಿದ್ದು, ಬ್ಯಾಂಕ್ ಖಾತೆಗೆ ಜಮಾ ಆಗಬೇಕು. ನೊಂದಾಯಿತ ಕಟ್ಟಡ ಕಾರ್ಮಿಕರ ಮದುವೆ ಸಹಾಯಧನ ಅರವತ್ತು ಸಾವಿರದಿಂದ ಒಂದು ಲಕ್ಷ ರೂ.ಗಳಿಗೆ ಹೆಚ್ಚಿಸಬೇಕು. ಮಹಿಳಾ ಕಟ್ಟಡ ಕಾರ್ಮಿಕರಿಗೆ ಹೆರಿಗೆ ಸಹಾಯಧನ ಐವತ್ತು ಸಾವಿರ ರೂ. ಠೇವಣಿ ಇಡದಂತೆ ಫಲಾನುಭವಿಗಳ ಖಾತೆಗೆ ವರ್ಗಾವಣೆಯಾಗಬೇಕು. ಕಟ್ಟಡ ಕಾರ್ಮಿಕರಿಗೆ ನೀಡಲಾಗುವ ನಿವೃತ್ತಿ ಪಿಂಚಣಿ ವಯಸ್ಸನ್ನು 60 ವರ್ಷದಿಂದ 55 ವರ್ಷಕ್ಕೆ ಇಳಿಸಿ ತಿಂಗಳಿಗೆ ಹತ್ತು ಸಾವಿರ ರೂ.ಪಿಂಚಣಿ ಘೋಷಿಸಬೇಕೆಂದು ಆಗ್ರಹಿಸಿದರು.

ಕಟ್ಟಡ ಕಾರ್ಮಿಕರ ಸಂಘದ ಅಧ್ಯಕ್ಷ ಕಾಂ.ರಾಜಪ್ಪ, ಪ್ರಧಾನ ಕಾರ್ಯದರ್ಶಿ ಕಾಂ.ಈ.ಸತ್ಯಕೀರ್ತಿ, ಕಾಂ.ಎಸ್.ಬಾಬು, ಕಾಂ.ರವಿಕುಮಾರ್, ಕಾಂ.ತಿಪ್ಪೇಸ್ವಾಮಿ, ಕಾಂ.ಮುಜಿಮಲ್ ಅಹಮದ್, ಕಾಂ.ಸೋಮಶೇಖರ್, ಕಾಂ.ಮಲ್ಲಪ್ಪ, ಕಾಂ.ನುಸ್ರುಲ್ಲಾ, ಕಾಂ.ಪ್ರಭು, ಕಾಂ.ಮಹಮದ್ ರಫಿಕ್, ಕಾಂ.ಶಶಿಧರ್, ಕಾಂ.ಶಶಿಕುಮಾರ್, ಕಾಂ.ವಿಶಾಲಮ್ಮ, ಕಾಂ.ವಿಜಯಕುಮಾರ್, ಕಾಂ.ಬಸವರಾಜ್‌ನಾಯ್ಕ, ಎಂ.ಬಿ. ಜಯದೇವಮೂರ್ತಿ, ಕಾಂ.ಪಾಪಯ್ಯ, ಕಾಂ.ಶಿವಕುಮಾರ್ ಇನ್ನು ಅನೇಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಘನ ತ್ಯಾಜ್ಯ ಘಟಕಗಳಿಗೆ ಜಿ.ಪಂ ಸಿಇಒ ಭೇಟಿ

» ಚಿತ್ರದುರ್ಗ

ಹಿರಿಯೂರು ತಾಲ್ಲೂಕಿನ ಬುರುಜಿನರೊಪ್ಪ ಹಾಗೂ ಚಳ್ಳಕೆರೆ ತಾಲ್ಲೂಕಿನ ಸಾಣಿಕೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಘನ ತ್ಯಾಜ್ಯ ಘಟಕಗಳಿಗೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಈಚೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಘನ ತ್ಯಾಜ್ಯ ಘಟಕಗಳ ಕಾರ್ಯಾಚರಣೆ ಬಗ್ಗೆ ಮಾಹಿತಿ ಪಡೆದ ಅವರು, ಅಧಿಕಾರಿ ಹಾಗೂ ಸಿಬ್ಬಂದಿಗಳಿಗೆ ಅಗತ್ಯ ನಿರ್ದೇಶನಗಳನ್ನು ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾಧಿಕಾರಿ ಸತೀಶ್ ರೆಡ್ಡಿ, ಉಪ ಕಾರ್ಯದರ್ಶಿಗಳು, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕನಿರ್ದೇಶಕರು,ನರೇಗಾ ತಾಂತ್ರಿಕ ಸಂಯೋಜಕರು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಸ್ವಚ್ಛ ಭಾರತ್ ಮಿಷನ್ ಗ್ರಾಮೀಣ ಜಿಲ್ಲಾ ಸಮಾಲೋಚಕರು, ಗ್ರಾಮ ಪಂಚಾಯಿತಿ ಸಿಬ್ಬಂದಿ ಇದ್ದರು.

ಸಚಿವಸುಧಾಕರ್ ವಿರುದ್ಧ ಟ್ವೀಟ್ ಮೂಲಕ ಬಿಜೆಪಿ ವಾಗ್ದಾಳಿ

ಯೋಜನೆ & ಸಾಂಖ್ಯಿಕ ಸಚಿವ ಡಿ.ಸುಧಾಕರ್ ವಂಚನೆ ಆರೋಪಕ್ಕೆ ಸಂಬಂಧಿಸಿ ಟ್ವೀಟ್ ಮೂಲಕ ಸಚಿವ ಡಿ.ಸುಧಾಕರ್ ವಿರುದ್ಧ ಬಿಜೆಪಿ ವಾಗ್ದಾಳಿ ನಡೆಸಿದೆ. ಯಾವ ಪುಡಿರೌಡಿಗಿಂತ ಕಡಿಮೆ ಇಲ್ಲ ಡಿ.ಸುಧಾಕರ್ ಗೂಂಡಾವರ್ತನೆ. ಸಿದ್ದರಾಮಯ್ಯ ಸಂಪುಟದಲ್ಲಿ ಜಾತಿ ನಿಂದಕರು, ಗೂಂಡಾಗಳೇ ಇದ್ದಾರೆ. ಸಿದ್ದರಾಮಯ್ಯಗೆ ದಲಿತರನ್ನು ಮೂಲೆಗುಂಪು ಮಾಡುವುದು ಕರಗತವಾದರೆ. ಡಿ.ಸುಧಾಕರ್‌ಗೆ ದಲಿತರನ್ನು ಅವಮಾನಿಸಿ ಗೂಂಡಾಗಿರಿ ಮಾಡುವ ಅಹಂ. ಸರ್ಕಾರ ಕೂಡಲೇ ಗೂಂಡಾ ಸಚಿವರ ಬಂಧಿಸಿ ರಾಜೀನಾಮೆ ಪಡೆಯಲಿ ಎಂದು ರಾಜ್ಯ ಬಿಜೆಪಿ ಆಗ್ರಹಿಸಿದೆ.

ಪ್ರಮುಖ ಸುದ್ದಿ

ದೇವರ ಎತ್ತುಗಳಿಗೆ ಮೇವು ನೀಡದ ರಾಜ್ಯ ಸರ್ಕಾರದ ವಿರುದ್ಧ ಜಪಾನಂದ ಶ್ರೀ ಬೇಸರ

ಚಳ್ಳಕೆರೆ ನಗರದ ಹೊರವಲಯದಲ್ಲಿ ಶ್ರೀಜಗಲೂರಜ್ಜ ದೇವಸ್ಥಾನದ ಆವರಣದಲ್ಲಿ ದೇವರ ಎತ್ತುಗಳಿಗೆ ಮೇವು ವಿತರಿಸಿದ ಪಾವಗಡ ಶ್ರೀರಾಮಕೃಷ್ಣ ಸೇವಾಶ್ರಮ ಜಪಾನಂದಸ್ವಾಮೀಜಿ.

» ಚಳ್ಳಕೆರೆ

ಕಳೆದ ಹಲವಾರು ವರ್ಷಗಳಿಂದ ಈ ಭಾಗದಲ್ಲಿ ಮಳೆ ಮರಿಚೀಕೆಯಾದ ಹಿನ್ನೆಲೆಯಲ್ಲಿ ಎಲ್ಲೆಡೆ ಜಾನುವಾರುಗಳಿಗೆ ಮೇವಿನ ಹಾಹಾಕಾರ ಉಂಟಾಗಿದೆ. ತಾಲ್ಲೂಕಿನ ಸಾವಿರಾರು ದೇವರ ಎತ್ತುಗಳು ಪ್ರತಿನಿತ್ಯ ಸಮರ್ಪಕವಾಗಿ ಮೇವಿಲ್ಲದೆ ಸೊರಗಿವೆ. ಈ ಹಿನ್ನೆಲೆಯಲ್ಲಿ ಕಡೆ ಪಕ್ಷ ದೇವರ ಎತ್ತುಗಳಿಗೆ ಮೇವು ನೀಡುವ ದೃಷ್ಟಿಯಿಂದ ಸುಧಾಮೂರ್ತಿ ಫೌಂಡೇಷನ್ ವತಿಯಿಂದ ಉಚಿತವಾಗಿ ಮೇವು ವಿತರಣೆ ಮಾಡಲಾಗುತ್ತಿದೆ ಎಂದು ಪಾವಗಡ ಶ್ರೀರಾಮಕೃಷ್ಣ ಸೇವಾಶ್ರಮ ಜಪಾನಂದಸ್ವಾಮೀಜಿ ತಿಳಿಸಿದರು.

ಅವರು, ಮಂಗಳವಾರ ಶ್ರೀಜಗಲೂರಜ್ಜ ದೇವಸ್ಥಾನದ ಆವರಣದಲ್ಲಿ ಒಟ್ಟು ನಾಲ್ಕು ಲೋಡ್ ಮೇವನ್ನು ಉಚಿತವಾಗಿದೇವರ ಎತ್ತುಗಳಿಗೆ ಹುಲ್ಲು ತಿನ್ನಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು.

ಕಳೆದ ಜೂನ್ ತಿಂಗಳ ಮಾಹೆಯಲ್ಲಿ ಈ ಭಾಗದ ಸಾವಿರಾರು ಜಾನುವಾರುಗಳಿಗೆ ಮೇವಿನ ಕೊರತೆ ಉಂಟಾಗಲಿದೆ ಎಂಬ ಮಾಹಿತಿ ಪಡೆದ ಹಿನ್ನೆಲೆಯಲ್ಲಿ ಸುಧಾಮೂರ್ತಿಯವರನ್ನು ಸಂಪರ್ಕಿಸಿದಾಗ ಅವರು ಉಚಿತ ಮೇವು ನೀಡುವ ಭರವಸೆ ನೀಡಿ ಅದರಂತೆ ಇಂದು ನಾಲ್ಕು ಲೋಡ್ ಮೇವನ್ನು ನೀಡಿದ್ದಾರೆ. ಈಗಾಗಲೇ ತಾಲ್ಲೂಕಿನಾದ್ಯಂತ ನಾಲ್ಕಕ್ಕೂ ಹೆಚ್ಚು ಬಾರಿ ಉಚಿತ ಮೇವನ್ನು ನೀಡಲಾಗಿದೆ ಎಂದರು.

ಈ ಹಿಂದೆ ಸರ್ಕಾರವನ್ನು ಜಾನುವಾರಿಗಳಿಗೆ ಉಚಿತ ಮೇವು ನೀಡುವಂತೆ ಒತ್ತಾಯಿಸಿದ್ದು, ಅದು ನಿರೀಕ್ಷಿತ ಮಟ್ಟದಲ್ಲಿ ಕೆಲಸವಾಗಿಲ್ಲ. ಕ್ಷೇತ್ರದ ಶಾಸಕರೂ ಸಹ ಉಚಿತ ಮೇವು ವಿತರಣೆಯ ಬಗ್ಗೆ ಇನ್ನೂ ಚರ್ಚಿಸಿಲ್ಲ. ಆದರೆ, ಪ್ರತಿನಿತ್ಯ ಈ ಭಾಗದ ಜಾನುವಾರುಗಳು ಹಸಿವಿನಿಂದ ನಿತ್ರಾಣವಾಗಿ ಪ್ರಾಣಕ್ಕೆ ಅಪಾಯವಿದೆ. ಈ ಹಿನ್ನೆಲೆಯಲ್ಲಿ ನಾನು ಸರ್ಕಾರವನ್ನು ರೈತರ ಮತ್ತು ಕಿಲಾರಿಗಳ ಪರವಾಗಿ ವಿಶೇಷ ಮನವಿ ಮಾಡುವುದೆಂದರೆ ಕಡೆ ಪಕ್ಷ ಲಭ್ಯವಿರುವ ಕಡೆಯಾದರು ಮೇವನ್ನು ವಿತರಣೆ ಮಾಡಬೇಕು ಎಂದರು.

ಕಾರ್ಯಕ್ರಮದ ವ್ಯವಸ್ಥಾಪಕರಾದ ಮಹೇಶ್‌ಕುಮಾರ್,ಸಿದ್ದೇಶ್,ಕಿಲಾರಿಗಳಾದ ದೊಡ್ಡಪಾಲಯ್ಯ, ಅಬ್ಬೇನಹಳ್ಳಿ ಪಾಲಯ್ಯ, ಎಂ.ಬಿ.ದೊಡ್ಡಬೋರಯ್ಯ, ಪ್ರಕಾಶ್ ಮುಂತಾದವರು ಉಪಸ್ಥಿತರಿದ್ದರು.

ಫಾಸ್ಟ್ ನ್ಯೂಸ್

ಕೆಎಸ್‌ಆರ್‌ಟಿಸಿ ಬಸ್ ಲಾರಿಗೆ ಡಿಕ್ಕಿ 9 ಜನ ಮೃತ

» ಚಳ್ಳಕೆರೆ

ಕಲ್ಯಾಣ ಕರ್ನಾಟಕ ಸಾರಿಗೆ ಸಂಸ್ಥೆಗೆ ಸೇರಿದ ಬಸ್ ಸುರಪುರ, ರಾಯಚೂರು ಮೂಲಕ ಬೆಂಗಳೂರಿಗೆ ಚಲಿಸುತ್ತಿದ್ದು, ಚಳ್ಳಕೆರೆ ತಾಲ್ಲೂಕಿನ ಗಡಿಭಾಗದ ಐಮಂಗಲ ಠಾಣಾ ವ್ಯಾಪ್ತಿಯ ಗೊಲಹಳ್ಳಿಯ ಬಳಿ ನಿಂತಿದ್ದ ಲಾರಿಗೆ ಹಿಂಬದಿಯಿಂದ ಡಿಕ್ಕಿ ಹೊಡೆದ ಪರಿಣಾಮವಾಗಿ ಇಬ್ಬರು ವ್ಯಕ್ತಿಗಳು ಇಲ್ಲಿನ ಸಾರ್ವಜನಿಕಆಸ್ಪತ್ರೆಯಲ್ಲಿಮೃತರಾಗಿದ್ದು,ಸುಮಾರು 9 ಜನರು ಗಾಯಗೊಂಡು ಪ್ರಾಥಮಿಕ ಚಿಕಿತ್ಸೆ ಪಡೆದು ಹೆಚ್ಚಿನ ಚಿಕಿತ್ಸೆಗೆ ಜಿಲ್ಲಾ ಆಸ್ಪತ್ರೆಗೆ ದಾಖಲಾಗಿದ್ದಾರೆ. ರಾಯಚೂರು ಜಿಲ್ಲೆಯ ಹಾಲಾಪುರ ಗ್ರಾಮದ ರವಿಕುಮಾರ್(24) ಬೆಂಗಳೂರಿನ ಖಾಸಗಿ ಕಂಪನಿಯಲ್ಲಿ ಉದ್ಯೋಗಿಯಾಗಿದ್ದು ಮದುವೆ ಮಾಡಿಕೊಳ್ಳಲು ತನ್ನ ಸ್ವಗ್ರಾಮವಾದ ಹಾಲಾಪುರದ ಬಳಿ ಇರುವ ಮಸ್ಕಿ ಗ್ರಾಮಕ್ಕೆ ತೆರಳಿ ವಧು ನೋಡಿಕೊಂಡು ಬೆಂಗಳೂರಿಗೆ ವಾಪಾಸ್ ಆಗುವ ಸಂದರ್ಭದಲ್ಲಿ ಈ ಅಪಘಾತದಿಂದ ಚಳ್ಳಕೆರೆ ಆಸ್ಪತ್ರೆಯಲ್ಲಿ ಮೃತಪಟ್ಟಿರುತ್ತಾನೆ. ಇವರೊಂದಿಗೆ ಪ್ರಯಾಣಿಸುತ್ತಿದ್ದ ನರಸಪ್ಪ(5) ಚಿಕ್ಕ ಮಗು ಸಹ ಮೃತಪಟ್ಟಿದ್ದು, ಸೊಲ್ಲಾಪುರದ ಲಕ್ಷ್ಮಮ್ಮ(50), ಸೋನಾಬಾಯಿ(30), ಶರತ್(40), ರಾಯಚೂರಿನ ಮಲ್ಲಮ್ಮ(13), ದೇವದುರ್ಗದ ಮೊನಮ್ಮ(50), ಕವಿತಾಳ ಗ್ರಾಮದ ಜುಬೇರ್(53), ಸಂಗಮೇಶ್(52), ಹಾಲಾಪುರದ ಖಾಸಿಂ(60) ಗಾಯಗೊಂಡು ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಸಾರಿಗೆ ಬಸ್, ಕಾರು ಮುಖಾಮುಖಿ ಡಿಕ್ಕಿ-9 ಜನರಿಗೆ ಗಂಭೀರ ಗಾಯ

ಸಾರಿಗೆ ಬಸ್, ಕಾರು ಮುಖಾಮುಖಿ ಡಿಕ್ಕಿಯಾಗಿ 9 ಜನರಿಗೆ ಗಂಭೀರ ಗಾಯಗಳಾಗಿರುವ ಘಟನೆ ಚಿಕ್ಕಮಗಳೂರು ಜಿಲ್ಲೆ ತರೀಕೆರೆ ತಾಲೂಕಿನ ಬಿಲ್ಲೇನಹಳ್ಳಿ ಬಳಿ ನಡೆದಿದೆ. ಗಾಯಗೊಂಡ 9 ಜನರಿಗೆ ಶಿವಮೊಗ್ಗದ ಮೆಗ್ಗಾನ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಲಾಗುತ್ತಿದೆ. ಕೆಎಸ್‌ಆರ್‌ಟಿಸಿ ಬಸ್ ಡಿಕ್ಕಿಯಾದ ರಭಸಕ್ಕೆ ಕಾರು ಸಂಪೂರ್ಣ ಜಖಂ ಆಗಿದೆ.

ಇಂದಿನಿಂದ ಟರ್ಮಿನಲ್-2ರಲ್ಲಿ ಅಂತಾರಾಷ್ಟ್ರೀಯ ವಿಮಾನ ಹಾರಾಟ ಶುರು

ಇಂದಿನಿಂದ ಟರ್ಮಿನಲ್–2ರಲ್ಲಿ ಅಂತಾರಾಷ್ಟ್ರೀಯ ವಿಮಾನಗಳ ಹಾರಾಟ ಆರಂಭವಾಗಲಿದೆ. ದೇವನಹಳ್ಳಿ ಬಳಿಯ ಕೆಂಪೇಗೌಡ ವಿಮಾನ ನಿಲ್ದಾಣದ ಬಹು ನಿರೀಕ್ಷಿತ ಅತ್ಯಾಧುನಿಕ ತಂತ್ರಜ್ಞಾನವುಳ್ಳ ಟರ್ಮಿನಲ್ 2ರಲ್ಲಿ ಅಂತಾರಾಷ್ಟ್ರೀಯ ವಿಮಾನಗಳ ಹಾರಾಟ ಆರಂಭವಾಗಲಿದೆ. ಬೆಳಗ್ಗೆ 10.45ಕ್ಕೆ ಟರ್ಮಿನಲ್–2ಗೆ ಮೊದಲ ವಿದೇಶಿ ವಿಮಾನ ಬಂದಿಳಿಯಲಿದೆ. ಹಳೆಯ ಟರ್ಮಿನಲ್–1 ದೇಶಿಯ ವಿಮಾನಗಳ ಹಾರಾಟಕ್ಕೆ ಮೀಸಲು. 5 ಸಾವಿರ ಕೋಟಿ ವೆಚ್ಚದಲ್ಲಿ ಗಾರ್ಡನ್ ಟರ್ಮಿನಲ್ ನಿರ್ಮಾಣವಾಗಿದೆ.

ಶಕ್ತಿ ಯೋಜನೆ ಮೂರು ತಿಂಗಳು ಪೂರ್ಣ, ವಾಯವ್ಯ ವಿಭಾಗದಲ್ಲಿ 332 ಕೋಟಿ ಟಿಕೆಟ್ ವೆಚ್ಚ

ರಾಜ್ಯ ಸರ್ಕಾರದ ಶಕ್ತಿ ಯೋಜನೆ ಜಾರಿಯಾಗಿ ಮೂರು ತಿಂಗಳು ಪೂರ್ಣಗೊಂಡಿದ್ದು ವಾಯವ್ಯ ಸಾರಿಗೆ ವಿಭಾಗದಲ್ಲಿ 13.20 ಕೋಟಿ ಮಹಿಳೆಯರು ಪ್ರಯಾಣಿಸಿದ್ದಾರೆ. 3 ತಿಂಗಳಲ್ಲಿ ಬರೋಬ್ಬರಿ 13 ಕೋಟಿ 20 ಲಕ್ಷ ಮಹಿಳೆಯರು ಪ್ರಯಾಣಿಸಿದ್ದು 332 ಕೋಟಿ 77 ಲಕ್ಷ ಮೌಲ್ಯದ ಟಿಕೆಟ್ ಹರಿಯಲಾಗಿದೆ. 6 ಜಿಲ್ಲೆಗಳ 9 ಸಾರಿಗೆ ವಿಭಾಗದ ಟಿಕೆಟ್ ಮೌಲ್ಯ 332 ಕೋಟಿ 77 ಲಕ್ಷ.

ಎಂ.ಪಿ.ರೇಣುಕಾಚಾರ್ಯಗೆ ಉತ್ತರ ಕೊಡುವ ಶಕ್ತಿ ನನಗೆ ಇದೆ: ಸಿದ್ದೇಶ್ವರ್

ಸ್ವಪಕ್ಷದವರ ವಿರುದ್ಧ ಎಂ.ಪಿ.ರೇಣುಕಾಚಾರ್ಯ ವಾಗ್ದಾಳಿ ವಿಚಾರಕ್ಕೆ ಸಂಬಂಧಿಸಿ ದಾವಣಗೆರೆ ನಗರದಲ್ಲಿ ಬಿಜೆಪಿ ಸಂಸದ ಜಿ.ಎಂ.ಸಿದ್ದೇಶ್ವರ್ ಪ್ರತಿಕ್ರಿಯೆ ನೀಡಿದರು. ಎಂ.ಪಿ.ರೇಣುಕಾಚಾರ್ಯಗೆ ಉತ್ತರ ಕೊಡುವ ಶಕ್ತಿ ನನಗೆ ಇದೆ. ಆದ್ರೆ ಎರಡೂವರೆ ತಿಂಗಳು ಮೌನವಾಗಿರಲು ಮಾಜಿ ಸಿಎಂ ಯಡಿಯೂರಪ್ಪ ಹೇಳಿದ್ದಾರೆ. ಲೋಕಸಭೆ ಚುನಾವಣೆಗೆ ಇನ್ನೂ ಆರೂವರೆ ತಿಂಗಳು ಬಾಕಿ ಇದೆ. ನಾನು ಎರಡೂವರೆ ತಿಂಗಳ ಮಾತಾಡಲ್ಲ. ಎರಡೂವರೆ ತಿಂಗಳಾದ ಬಳಿಕ ಸುದ್ದಿಗೋಷ್ಠಿ ನಡೆಸಿ ಉತ್ತರ ನೀಡುತ್ತೇನೆ.

ಬೃಹತ್ ಉಚಿತ ನೇತ್ರ ತಪಾಸಣೆ, ಶಸ್ತ್ರಚಿಕಿತ್ಸೆ ಹಾಗೂ ಕನ್ನಡಕ ವಿತರಣಾ ಶಿಬಿರದಲ್ಲಿ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ

ಕಣ್ಣುಗಳ ರಕ್ಷಣೆ ಅತ್ಯಮೂಲ್ಯವಾದುದು

» ಚಿತ್ರದುರ್ಗ

ಕಣ್ಣುಗಳು ನಮ್ಮ ಆತ್ಮದ ಕಿಟಕಿಗಳಿದ್ದಂತೆ. ಅದರ ರಕ್ಷಣೆ ಅಮೂಲ್ಯವಾದದ್ದು. ಪ್ರತಿಯೊಬ್ಬರು ಕಣ್ಣುಗಳ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದು ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಗೋನೂರು ಗ್ರಾಮ ಪಂಚಾಯಿತಿ ಆವರಣದಲ್ಲಿ ಸೋಮವಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತಾಲ್ಲೂಕು ಪಂಚಾಯಿತಿ, ಜಿಲ್ಲಾ ಅಂದತ್ವ ನಿವಾರಣಾ ವಿಭಾಗ, ತಾಲ್ಲೂಕು ಆರೋಗ್ಯಾಧಿಕಾರಿಗಳ ಕಚೇರಿ, ಶಂಕರ ಕಣ್ಣಿನ ಆಸ್ಪತ್ರೆ, ಬೆಂಗಳೂರು ದಿ ಟೈಟನ್ ಕಂಪನಿ ಲಿಮಿಟೆಡ್, ಗೋನೂರು ಗ್ರಾಮ ಪಂಚಾಯಿತಿ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ ಬೃಹತ್ ಉಚಿತ ನೇತ್ರ ತಪಾಸಣೆ, ಶಸ್ತ್ರಚಿಕಿತ್ಸೆ ಹಾಗೂ ಕನ್ನಡಕ ವಿತರಣಾ ಶಿಬಿರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ನೇತ್ರ ತಪಾಸಣೆ ಚಿಕಿತ್ಸಾ ಶಿಬಿರವು ಕೇವಲ ಈ ಒಂದು ದಿನಕ್ಕೆ ಮಾತ್ರ ಸೀಮಿತವಾಗಿರದೇ, ಪ್ರತಿ ತಿಂಗಳು ಚಿತ್ರದುರ್ಗ ತಾಲ್ಲೂಕಿನ ಆಯ್ದ ಮೂರು ಗ್ರಾಮಗಳಲ್ಲಿ ಶಿಬಿರ ನಡೆಸಲಾಗುವುದು. ಸಾರ್ವಜನಿಕರು ಇದರ ಸದುಪಯೋಗ ಪಡಿಸಿಕೊಳ್ಳಬೇಕು. ಇದಲ್ಲದೆ ಗ್ರಾಮದ ಇತರೆ ಸಮಸ್ಯೆಗಳಿಗೂ ಸ್ಪಂದಿಸುತ್ತೇನೆ. ಅಲ್ಲದೆ ಸಂಚಾರಿ ಡಯಾಲಿಸಿಸ್ ಘಟಕ ಶೀಘ್ರದಲ್ಲೇ ಪ್ರಾರಂಭಿಸಲು ಯೋಜನೆ ರೂಪಿಸುತ್ತಿದ್ದೇನೆ ಎಂದರು.

ಚಿತ್ರನಟ, ಕಲಾವಿದ ದೊಡ್ಡಣ್ಣ ಮಾತನಾಡಿ, ಕಳೆದ 13 ವರ್ಷಗಳಿಂದ ಕಣ್ಣುಗಳ ಆರೈಕೆಗಾಗಿ ಸೇವೆ ಸಲ್ಲಿಸುತ್ತಾ, ಸಮಾಜ ಸೇವಕನಾಗಿ ಚಿತ್ರರಂಗದ ಒಬ್ಬ ನಟನಾಗಿ ಕಾರ್ಯನಿರ್ವಹಿಸುತ್ತಿದ್ದು, ಇಲ್ಲಿಯವರೆಗೂ ಒಟ್ಟು 1025 ಉಚಿತ ಶಸ್ತ್ರ ಕಣ್ಣಿನ ಶಸ್ತ್ರಚಿಕಿತ್ಸೆಗಳನ್ನು ಮಾಡಿಸಲಾಗಿದೆ. ಪಂಚ ಇಂದ್ರಿಯಗಳಲ್ಲಿ ಪ್ರಧಾನವಾದ ಇಂದ್ರಿಯ ಕಣ್ಣು ಆಗಿರುತ್ತದೆ. ಕಣ್ಣುಗಳನ್ನು ದಾನ ಮಾಡುವವರು ಮುಂದೆ ಬನ್ನಿ. ಅಂದತ್ವ ನಿವಾರಣೆಗಾಗಿ ಎಲ್ಲರೂ ಕೈ ಜೋಡಿಸಿ ಎಂದರು.

ಇದೇ ಸೆಪ್ಟೆಂಬರ್ 12ರಂದು ದೊಡ್ಡಸಿದ್ದವ್ವನಹಳ್ಳಿ, 13ರಂದು ಸಿದ್ದಾಪುರ ಗ್ರಾಮ ಪಂಚಾಯಿತಿ ಜಾಲಿಕಟ್ಟೆ ಗ್ರಾಮ, 14ರಂದು ಸೊಂಡೆಕೊಳ ಗ್ರಾಮ ಪಂಚಾಯಿತಿಯಲ್ಲಿ ಉಚಿತ ನೇತ್ರ ತಪಾಸಣೆ ಶಸ್ತ್ರ ಚಿಕಿತ್ಸೆ ಹಾಗೂ ಕನ್ನಡಕ ವಿತರಣಾ ಶಿಬಿರ ನಡೆಯಲಿದೆ. ಆಯಾ ಗ್ರಾಮ ಪಂಚಾಯಿತಿಗಳ ಸಾರ್ವಜನಿಕರು ಶಿಬಿರದ ಉಪಯೋಗ ಪಡೆದುಕೊಳ್ಳಿ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಆರ್ ರಂಗನಾಥ್, ತಾಲ್ಲೂಕು ಆರೋಗ್ಯಾಧಿಕಾರಿ ಡಾ. ಜಯಶ್ರೀ, ರಾಷ್ಟ್ರೀಯ ಅಂದತ್ವ ನಿವಾರಣ ಕಾರ್ಯಕ್ರಮದ ಅನುಷ್ಠಾನಾಧಿಕಾರಿ ಡಾ. ಚಂದ್ರಶೇಖರ್, ಗೋನೂರು ಗ್ರಾಮ ಪಂಚಾಯಿತಿ ಅಧ್ಯಕ್ಷೆ ಗುಂಡಮ್ಮ, ತಾಪಂ ಇಒ ಹನುಮಂತಪ್ಪ, ಎಸ್‌ಆರ್‌ಎಸ್ ವಿದ್ಯಾಸಂಸ್ಥೆಯ ಲಿಂಗಾರೆಡ್ಡಿ, ಪಿಡಿಒ ಹೆಚ್.ಯರ್ರಿಸ್ವಾಮಿ, ಶಂಕರ ಕಣ್ಣಿನ ಆಸ್ಪತ್ರೆಯ ಮಂಜುನಾಥ್ ಸೇರಿದಂತೆ ಮತ್ತಿತರರು ಇದ್ದರು.

ಪ್ರತಿಭೆ ಅನಾವರಣಗೊಳಿಸುವ ಕೆಲಸವಾಗಲಿ

» ಚಿತ್ರದುರ್ಗ

ಪ್ರತಿ ಮಗುವಿನಲ್ಲಿಯೂ ಒಂದಲ್ಲ ಒಂದು ರೀತಿಯ ಪ್ರತಿಭೆ ಇರುತ್ತದೆ. ಅದನ್ನು ಗುರುತಿಸಿ ಹೊರ ತರುವುದಕ್ಕಾಗಿ ಪ್ರತಿ ವರ್ಷವೂ ಶಾಲಾ ಹಂತದಲ್ಲಿ ಪ್ರತಿಭಾ ಕಾರಂಜಿ/ಕಲೋತ್ಸವ ಆಚರಿಸಿಕೊಂಡು ಬರಲಾಗುತ್ತಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ನಾಗಭೂಷಣ್ ತಿಳಿಸಿದರು.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ವತಿಯಿಂದ ಗುರುಭವನದ ಎದುರಿನಲ್ಲಿರುವ ಸಿ.ಆರ್.ಸಿ.ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗಿದ್ದ 2023–24 ನೇ ಸಾಲಿನ ಚಿತ್ರದುರ್ಗ ದಕ್ಷಿಣ ಕ್ಲಸ್ಟರ್ ಹಂತದ ಪ್ರತಿಭಾ ಕಾರಂಜಿ/ಕಲೋತ್ಸವ ಉದ್ಘಾಟಿಸಿ ಮಾತನಾಡಿದರು.

ಮಗುವಿನಲ್ಲಿರುವ ಕಲೆ, ಸಂಗೀತ, ನೃತ್ಯ, ಸಾಂಸ್ಕೃತಿಕ ಕೌಶಲ್ಯಗಳನ್ನು ಹೊರತರುವುದಕ್ಕಾಗಿ ನಡೆಸುವ ಪ್ರತಿಭಾ ಕಾರಂಜಿ/ಕಲೋತ್ಸವ ಶಾಲಾ ಹಂತದಿಂದ ರಾಜ್ಯ ಮಟ್ಟದವರೆಗೂ ನಡೆಯಲಿದೆ. ಶಿಕ್ಷಣ ಎನ್ನುವುದು ಓದು, ಬರಹಕ್ಕಷ್ಟೆ ಸೀಮಿತವಾಗುವ ಬದಲು ಇಂತಹ ಕಾರ್ಯಕ್ರಮಗಳ ಮೂಲಕ ಪ್ರತಿಭೆಗಳನ್ನು ಅನಾವರಣಗೊಳಿಸುವ ಕೆಲಸವಾಗಬೇಕು. ತೀರ್ಪುಗಾರರು ಉತ್ತಮವಾದ ತೀರ್ಪುಗಳನ್ನು ನೀಡಿ ಮಕ್ಕಳನ್ನು ಪ್ರೋತ್ಸಾಹಿಸಬೇಕು. ಸೋಲು–ಗೆಲುವು ಮುಖ್ಯವಲ್ಲ. ಭಾಗವಹಿಸುವಿಕೆ ಮುಖ್ಯ ಎಂದು ಹೇಳಿದರು.

ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಬಿ.ಪಿ.ಪ್ರಕಾಶ್‌ಮೂರ್ತಿ ಮಾತನಾಡಿ ಶಾಲೆಯಲ್ಲಿ ಶಿಕ್ಷಕರುಗಳಿಗೆ ಹೊರೆಯಾಗುತ್ತಿರುವುದು ಸ್ಪರ್ಧಾತ್ಮಕ ಜಗತ್ತಿನಲ್ಲಿ ಅನಿವಾರ್ಯ. ಸ್ವಾರ್ಥಕ್ಕಾಗಿ ಬದುಕುವ ಬದಲು ಸಮಾಜಕ್ಕಾಗಿ ಬದುಕಿದವರು ಮರಣದ ನಂತರವೂ ನೆನಪಿನಲ್ಲಿ ಉಳಿಯುತ್ತಾರೆ. ಸೇವೆ ಮಾಡಲು ಜಾತಿ ಅಡ್ಡಿಯಾಗಬಾರದು. ಶಿಕ್ಷಕರು ಕೇವಲ ವೇತನಕ್ಕಾಗಿ ಕೆಲಸ ಮಾಡುವುದಕ್ಕಿಂತ ಜವಾಬ್ದಾರಿಯನ್ನರಿತು ಸೇವೆ ಸಲ್ಲಿಸಬೇಕು ಎಂದರು.

ಇ.ಸಿ.ಓ.ರವೀಂದ್ರ, ಕರಿಯಪ್ಪ, ಸಿ.ಆರ್.ಪಿ. ಓ.ಶ್ವೇತ,ಮುಖ್ಯಶಿಕ್ಷಕರುಗಳಾದವಸಂತಕುಮಾರ್, ಗಣಪತಿಭಟ್, ಎಸ್.ಡಿ.ಎಂ.ಸಿ.ಅಧ್ಯಕ್ಷೆ ಶ್ರುತಿ ವೇದಿಕೆಯಲ್ಲಿದ್ದರು.

ಶಿಕ್ಷಕಿ ವಸಂತಲಕ್ಷ್ಮಿ ಪ್ರಾರ್ಥಿಸಿದರು. ಮುಖ್ಯ ಶಿಕ್ಷಕಿ ಸ್ವಾಗತಿಸಿದರು. ಶಿಕ್ಷಕ ಸಂತೋಷ್‌ಕುಮಾರ್ ಕೆ.ಟಿ. ವಂದಿಸಿದರು.

108 ಚಾಲಕ ಹಾಗೂ ಸ್ಟಾಫ್ ನರ್ಸ್ ಅಮಾನತ್ತಿಗೆ ಒತ್ತಾಯಿಸಿ ಕರುನಾಡ ವಿಜಯಸೇನೆ ಪ್ರತಿಭಟನೆ

» ಚಿತ್ರದುರ್ಗ

ರಾಷ್ಟ್ರೀಯ ಹೆದ್ದಾರಿ–13 ರಲ್ಲಿರುವ ಬೊಗಳೇರಹಟ್ಟಿ ಗ್ರಾಮದ ಸಮೀಪ ಕಳೆದ 10 ರಂದು ಸಂಭವಿಸಿದ ಅಪಘಾತದಲ್ಲಿ ದುಗ್ಗೇಶ್ ಮೃತಪಟ್ಟಿರುವುದಕ್ಕೆ ಚಿತ್ರದುರ್ಗ ನಗರದ 108 ವಾಹನ ಸಂಖ್ಯೆ ಕೆ.ಎ.16–ಜಿ–594 ಚಾಲಕ ಮತ್ತು ಸ್ಟಾಫ್ ನರ್ಸ್ ಇವರುಗಳ ಉದಾಸೀನತೆ ಕಾರಣ ಎಂದು ಆಪಾದಿಸಿ ಕರುನಾಡ ವಿಜಯಸೇನೆ ವತಿಯಿಂದ ಸೋಮವಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿ ಚಾಲಕ ಮತ್ತು ಸ್ಟಾಫ್ ನರ್ಸ್ ಇವರುಗನ್ನು ಸೇವೆಯಿಂದ ಅಮಾನತ್ತುಗೊಳಿಸುವಂತೆ ಮನವಿ ಸಲ್ಲಿಸಲಾಯಿತು. ರಾತ್ರಿ ಸುಮಾರು 11 ರಿಂದ 11–40 ರ ಅವಧಿಯಲ್ಲಿ ಅಪಘಾತ ಸಂಭವಿಸಿದ್ದು, ತೀವ್ರ ಗಾಯಗೊಂಡಿದ್ದ ದುಗ್ಗೇಶ್‌ರನ್ನು ದಾವಣಗೆರೆಗೆ ಸಾಗಿಸಲು 108 ಚಾಲಕ ಸುತರಾಂ ಒಪ್ಪದ ಕಾರಣ ಮೃತಪಡಬೇಕಾಯಿತು. ಇದರಿಂದ ಅವರ ಕುಟುಂಬ ತಬ್ಬಲಿಯಾಗಿದ್ದು, ಮುಂದಿನ ಜೀವನೋಪಾಯಕ್ಕೆ ಪರಿಹಾರ ನೀಡುವಂತೆ ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಯನ್ನು ಒತ್ತಾಯಿಸಿದರು.

ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ವೀಣಗೌರಣ್ಣ, ಕಾರ್ಯದರ್ಶಿ ಜಗದೀಶ್, ಉಪಾಧ್ಯಕ್ಷೆ ರತ್ನಮ್ಮ, ಮಹಮದ್ ರಫಿ, ಕಮಲಮ್ಮ, ವಿಶ್ವನಾರಾಯಣಮೂರ್ತಿ, ಪ್ರದೀಪ್ ಆರ್. ಅವಿನಾಶ್, ಅಭಿಷೇಕ್, ರವಿ ಡಿ. ಹಾಗೂ ದುಗ್ಗೇಶ್ ಕುಟುಂಬದವರು ಪ್ರತಿಭಟನೆಯಲ್ಲಿದ್ದರು.

ಸಮನ್ವಯ ಶಿಕ್ಷಣ ಸಂಪನ್ಮೂಲ ಶಿಕ್ಷಕರ ಹುದ್ದೆ: ಅರ್ಜಿ ಆಹ್ವಾನ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲೆಯಲ್ಲಿ ಖಾಲಿ ಇರುವ ಬಿ.ಐ.ಇ.ಆರ್.ಟಿ (ಪ್ರಾಥಮಿಕ–ಹಂತ 1 ರಿಂದ 5ನೇ ತರಗತಿ) ಹುದ್ದೆಗಳನ್ನು ತಾತ್ಕಾಲಿಕವಾಗಿ ನೇರಗುತ್ತಿಗೆ ಆಧಾರದ ಮೇಲೆ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ಸೆಪ್ಟೆಂಬರ್ 16 ಅರ್ಜಿ ಸಲ್ಲಿಸಲು ಕೊನೆಯ ದಿನ. ಸಮಗ್ರ ಶಿಕ್ಷಣ ಕರ್ನಾಟಕ ರಾಜ್ಯ ಯೋಜನಾ ನಿರ್ದೇಶಕರು 2023–24ನೇ ಸಾಲಿನಿಂದ ಸಮನ್ವಯ ಶಿಕ್ಷಣ ಮಧ್ಯವರ್ತನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿಜಿಲ್ಲೆಯಲ್ಲಿ ಖಾಲಿ ಇರುವ ಸಮನ್ವಯ ಶಿಕ್ಷಣ ಸಂಪನ್ಮೂಲ ಶಿಕ್ಷಕರುಗಳ (ಪ್ರಾಥಮಿಕ ಹಂತ 1 ರಿಂದ 5ನೇ ತರಗತಿ) ಹುದ್ದೆಗಳನ್ನು ನೇರ ಗುತ್ತಿಗೆಯಡಿಲ್ಲಿ ಭರ್ತಿ ಮಾಡುವ ಕುರಿತು ಆದೇಶಿಸಿರುತ್ತಾರೆ. ಅದರಂತೆ ವಿಶೇಷ ಶಿಕ್ಷಣದಲ್ಲಿ ಆರ್‌ಸಿಐ ನಿಯಮದಂತೆ (ವಿಶೇಷ ಚೇತನ ಮಕ್ಕಳಿಗೆ) ಪ್ರಾಥಮಿಕ ಬಿ.ಐ.ಇ.ಆರ್.ಟಿ ಹುದ್ದೆಗೆ D.Ed in special education from a RCI approved institution and possess a valid RCI CRR nuber OR D.EL.Ed with a recognised Qualification (Certificate/Diploma) from RCI approved institution equivalent to D.ed in special education and possess a valid RCI CRR number ºÁUÀÆ 6 Month Training of teaching in cross disability area in inclusive education ವಿದ್ಯಾರ್ಹತೆಯನ್ನು ಹೊಂದಿರುವ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಹ ಅಭ್ಯರ್ಥಿಗಳು ಸಂಬಂಧಿಸಿದ ವಿದ್ಯಾರ್ಹತೆಯ ದಾಖಲೆಗಳು ಉಪನಿರ್ದೇಶಕರು (ಆಡಳಿತ) ಹಾಗೂ ಪದನಿಮಿತ್ತ ಜಿಲ್ಲಾ ಯೋಜನಾಧಿಕಾರಿಗಳ ಕಚೇರಿ, ಸಮಗ್ರ ಶಿಕ್ಷಣ ಕರ್ನಾಟಕ, ಚಿತ್ರದುರ್ಗ ಇಲ್ಲಿಗೆ ಮುದ್ರಾಂಕ ಆಗಿ ಇದೇ ಸೆಪ್ಟೆಂಬರ್ 16ರ ಮಧ್ಯಾಹ್ನ 1.30ರ ಒಳಗೆ ಅರ್ಜಿಗಳನ್ನು ಸಲ್ಲಿಸಬೇಕು.

ಪ್ರಮುಖ ಸುದ್ದಿ

ಸಮಾನತೆ ಎಲ್ಲರಿಗೂ ಮಾದರಿಯಾಗಲಿ: ಡಿವೈಎಸ್ಪಿ

» ಚಳ್ಳಕೆರೆ

ಕಳೆದ ಹಲವಾರು ವರ್ಷಗಳಿಂದ ಎಲ್ಲಾ ಸಮುದಾಯಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ಯಾವುದೇ ರೀತಿಯ ಅವ್ಯವಸ್ಥೆ ಇಲ್ಲದೆ ಶ್ರೀಗಣೇಶ ಚತುರ್ಥಿ ಮತ್ತು ಈದ್ ಮಿಲಾದ್ ಹಬ್ಬವನ್ನು ಆಚರಣೆ ಮಾಡಲಾಗುತ್ತಿದ್ದು, ಈ ಬಾರಿಯೂ ಸಹ ಹೆಚ್ಚು ಗೌರವ, ವಿಶ್ವಾಸದೊಡನೆ ಎಲ್ಲಾ ಸಮುದಾಯದ ಬಂಧುಗಳು ಪರಸ್ಪರ ವಿಶ್ವಾಸದಿಂದ ಆಚರಣೆ ಮಾಡಬೇಕೆಂದು ಉಪವಿಭಾಗದ ಡಿವೈಎಸ್ಪಿ ರಾಜಣ್ಣ ತಿಳಿಸಿದರು.

ಅವರು, ಪೊಲೀಸ್ ಠಾಣೆ ಆವರಣದಲ್ಲಿ ಗಣೇಶ ಮತ್ತು ಈದ್ ಮಿಲಾದ್ ಪ್ರಯುಕ್ತ ಏರ್ಪಡಿಸಿದ್ದ ಶಾಂತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಚಳ್ಳಕೆರೆ ತಾಲ್ಲೂಕಿನ ಇತಿಹಾಸದಲ್ಲಿ ಯಾವುದೇ ಸಮುದಾಯಗಳು ಹಬ್ಬ ಆಚರಣೆ ಮಾಡಿದರೂಬೇರೆಎಲ್ಲಾಸಮುದಾಯಗಳು ಕೈಜೋಡಿಸುವ ಮೂಲಕ ಸಾಮರಸ್ಯತೆಗೆ ಹೆಸರಾಗಿದೆ. ಮುಂದಿನ ದಿನಗಳಲ್ಲೂ ಸಹ ಹಿಂದು, ಮುಸ್ಲಿಂ ಬಂಧುಗಳು ಒಗಟ್ಟಿನಿಂದ ಕಾರ್ಯಕ್ರಮಗಳನ್ನು ಮುಂದುವರೆಸಿಕೊಂಡು ಹೋಗಬೇಕು ಎಂದರು. ಠಾಣಾ ಇನ್ಸ್‌ಪ

ಫಾಸ್ಟ್ ನ್ಯೂಸ್

ಕಾಗೆಗಳಿಗೆ ಇರುವ ಸಾಮಾನ್ಯ ಬುದ್ಧಿಯೂ ಪ್ರಕಾಶ್ ರಾಜ್‌ಗೆ ಇಲ್ಲ: ಎನ್. ರವಿಕುಮಾರ್

ಕಲ್ಬುರ್ಗಿಯಲ್ಲಿ ನಟ ಪ್ರಕಾಶ್ ರಾಜ್ ಸನಾತನ ಧರ್ಮದವರನ್ನು ಕಾಗೆಗಳಿಗೆ ಹೋಲಿಸಿದ್ದ ವಿಚಾರಕ್ಕೆ ಸಂಬಂಧಿಸಿ ಬೆಂಗಳೂರಿನಲ್ಲಿ ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಎನ್. ರವಿಕುಮಾರ್ ಅವರು ನಟ ಪ್ರಕಾಶ್ ರಾಜ್ ವಿರುದ್ಧ ಆಕ್ರೋಶ ಹೊರ ಹಾಕಿದ್ದಾರೆ. ಕಾಗೆಗಳಿಗೆ ಇರುವ ಸಾಮಾನ್ಯ ಬುದ್ಧಿಯೂ ಪ್ರಕಾಶ್ ರಾಜ್‌ಗೆ ಇಲ್ಲ. ಕಾಗೆ ಹಂಚಿಕೊಂಡು ತಿನ್ನುವ ಪಕ್ಷಿ. ಪ್ರಕಾಶ್ ರಾಜ್ ಕೆಟ್ಟದ್ದನ್ನೇ ಯೋಚನೆ ಮಾಡುವ ಪ್ರಾಣಿ. ಆ ಪ್ರಾಣಿಯ ಹೆಸರು ನಾನು ಹೇಳಲ್ಲ. ಎಲ್ಲಾ ಧರ್ಮಗಳಲ್ಲೂ ಕೆಲವು ಲೋಪಗಳಿವೆ, ಮನುಷ್ಯನಲ್ಲೂ ಕೊರತೆ ಇವೆ. ಕೆಟ್ಟದ್ದನ್ನೇ ಮಾತಾಡುವ ಪ್ರಾಣಿ ಅಂದರೆ ಅದು ಪ್ರಕಾಶ್ ರಾಜ್ ಎಂದರು.

ಬಿಟ್‌ಕಾಯಿನ್ ಪ್ರಕರಣದ ತನಿಖೆ ಚುರುಕು, ಬೆಂಗಳೂರಿನ 4ಕ್ಕೂ ಹೆಚ್ಚು ಕಡೆ ಎಸ್‌ಐಟಿ ದಾಳಿ

ಎಸ್‌ಐಟಿ ತಂಡ ಬಿಟ್ ಕಾಯಿನ್ ಪ್ರಕರಣದ ತನಿಖೆ ಚುರುಕುಗೊಳಿಸಿದ್ದು ಬೆಂಗಳೂರಿನ 4ಕ್ಕೂ ಹೆಚ್ಚು ಕಡೆ ಸಿಐಡಿಯ ಎಸ್‌ಐಟಿ ತಂಡ ದಾಳಿ ನಡೆಸಿದೆ. ಶ್ರೀಕಿ, ಸುನೀಲ್ ಹೆಗ್ಡೆ, ಪ್ರಸಿದ್ಧ್ ಸೇರಿ ಪ್ರಮುಖ ಮೂರು ಆರೋಪಿಗಳ ಮನೆ ಮೇಲೆ ಎಸ್‌ಐಟಿ ದಾಳಿ ನಡೆಸಿದೆ. ಕೋರ್ಟ್‌ನಿಂದ ಸರ್ಚ್ ವಾರಂಟ್ ಪಡೆದು ಸಿಐಡಿ ತಂಡ ಪರಿಶೀಲನೆ ನಡೆಸಿದೆ.

ಇಷ್ಟುಬೇಗ ಸರ್ಕಾರ ಜನಪ್ರಿಯತೆ ಕಳೆದುಕೊಳ್ಳುತ್ತೆಂದು ನಿರೀಕ್ಷಿಸಿರಲಿಲ್ಲ

ಇಷ್ಟು ಬೇಗ ಸಿದ್ದರಾಮಯ್ಯ ಸರ್ಕಾರ ಜನಪ್ರಿಯತೆ ಕಳೆದುಕೊಳ್ಳುತ್ತದೆ ಅಂತಾ ನಿರೀಕ್ಷೆ ಮಾಡಿರಲಿಲ್ಲ. ಇವತ್ತು ಮುಂದಿನ ಹೋರಾಟದ ಕುರಿತು ನಾವು ಚರ್ಚೆ ಮಾಡುತ್ತೇವೆ ಎಂದು ಬೆಂಗಳೂರಿನಲ್ಲಿ ಮಾಜಿ ಮುಖ್ಯಮಂತ್ರಿ ಃ.ಖ.ಯಡಿಯೂರಪ್ಪ ತಿಳಿಸಿದರು. ಸಿದ್ದರಾಮಯ್ಯ ಃಎಕ ಸೇರಲು ಅಡ್ವಾಣಿ ಭೇಟಿಯಾಗಿದ್ದರೆಂಬ ಆರೋಪ ಸಂಬಂಧ ಮಾತನಾಡಿದ ಬಿಎಸ್‌ವೈ ಅದೆಲ್ಲ ಏನೂ ಇಲ್ಲ ಎಂದರು.

ಬೆಂಗಳೂರಿನಲ್ಲಿ ಆಂಧ್ರಪ್ರದೇಶ ಮೂಲದ ಸೈಬರ್ ಹ್ಯಾಕರ್ ಬಂಧನ

ಬೆಂಗಳೂರಿನಲ್ಲಿ ಆಂಧ್ರಪ್ರದೇಶದ ಚಿತ್ತೂರು ಮೂಲದ ಸೈಬರ್ ಹ್ಯಾಕರ್‌ನನ್ನು ಆಗ್ನೇಯ ಸೈಬರ್ ಸೆನ್ ಪೊಲೀಸರು ಬಂಧಿಸಿದ್ದಾರೆ. ಲಕ್ಷೀಪತಿ ಬಂಧಿತ ಆರೋಪಿ. ಪೊಲೀಸರು 4.16 ಕೋಟಿ ಮೌಲ್ಯದ ಚಿನ್ನ, ಬೆಳ್ಳಿ, 11 ಲಕ್ಷ ನಗದು, 7 ಬೈಕ್ ಜಪ್ತಿ ಮಾಡಿದ್ದಾರೆ. ಬಂಧಿತ ಆರೋಪಿ ವೆಬ್‌ಸೈಟ್, ಸರ್ವರ್ ಹ್ಯಾಕ್ ಮಾಡಿ ಕೋಟ್ಯಂತರ ರೂ. ವಂಚನೆ ಮಾಡ್ತಿದ್ದ.

ಬೆಂಗಳೂರಿನಲ್ಲಿ ತಮಿಳುನಾಡು ಸಾರಿಗೆ ಬಸ್ ಮೇಲೆ ಕಲ್ಲು

ಬೆಂಗಳೂರಿನ ಸ್ಯಾಟ್‌ಲೈಟ್ ಸಮೀಪದ ಭಾರತ್ ಪೆಟ್ರೋಲ್ ಬಂಕ್ ಬಳಿ ತಮಿಳುನಾಡು ಸಾರಿಗೆ ಬಸ್‌ಗಳ ಮೇಲೆ ಕಲ್ಲು ತೂರಾಟ ನಡೆದಿದೆ. ಬಸ್ ಚಾಲಕ ಗುಣಶೇಖರನ್ ದೂರಿನ ಮೇರೆಗೆ ಚಾಮರಾಜಪೇಟೆ ಪೊಲೀಸ್ ಠಾಣೆಯಲ್ಲಿ ಎ□□□ಆರ್ ದಾಖಲಾಗಿದೆ. ಸೆ.11ರ ಮಧ್ಯರಾತ್ರಿ 4 ಬಸ್‌ಗಳ ಮೇಲೆ ದುಷ್ಕರ್ಮಿಗಳು ಕಲ್ಲು ತೂರಿದ್ದಾರೆ.

ಶ್ರೀಗಂಧದ ತುಂಡು ಸಾಗಿಸುತ್ತಿದ್ದ ಕಾರು ಪಲ್ಟಿ: ಮೂವರಿಗೆ ಗಾಯ

ಚಿಕ್ಕಬಳ್ಳಾಪುರ ಜಿಲ್ಲೆಯ ಬಾಗೇಪಲ್ಲಿ ತಾಲೂಕಿನ ಸಾದಲಿ ಗೇಟ್ ಬಳಿ ರಾಷ್ಟ್ರೀಯ ಹೆದ್ದಾರಿ 44ರಲ್ಲಿ ಶ್ರೀಗಂಧದ ತುಂಡು ಸಾಗಿಸುತ್ತಿದ್ದ ಕಾರು ಪಲ್ಟಿಯಾಗಿದ್ದು ಕಾರಿನಲ್ಲಿದ್ದ ಮೂವರಿಗೆ ಗಾಯಗಳಾಗಿವೆ. ಗಾಯಾಳುಗಳನ್ನು ಜಿಲ್ಲಾಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗುತ್ತಿದೆ. ಆರೋಪಿಗಳು, ಅಕ್ರಮವಾಗಿ ಆಂಧ್ರದಿಂದ ಬೆಂಗಳೂರಿಗೆ ರಕ್ತಚಂದನ ಸಾಗಿಸುತ್ತಿದ್ದರು.

ದೇಶಭಕ್ತಿ ಪಸರಿಸುವ ನನ್ನ ಮಣ್ಣು ನನ್ನ ದೇಶ

» ಚಿತ್ರದುರ್ಗ

"ನನ್ನ ಮಣ್ಣು ನನ್ನ ದೇಶ" ದೇಶದ ಭಕ್ತಿಯನ್ನು ದೇಶದ ಮೂಲೆಮೂಲೆಗೆ ಪಸರಿಸುವ ಕಾರ್ಯಕ್ರಮ ಇದಾಗಿದೆ ಎಂದು ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ರಾಜ್ಯ ಸಚಿವರು ಹಾಗೂ ಸಂಸದ ಎ.ನಾರಾಯಣಸ್ವಾಮಿ ಹೇಳಿದರು.

ನಗರದ ಜೆಸಿಆರ್ ಬಡಾವಣೆಯ ಗಣಪತಿ ದೇಗುಲದಲ್ಲಿ ಸೋಮವಾರ ಪೂಜೆ ಸಲ್ಲಿಸಿ, "ನನ್ನ ಮಣ್ಣು ನನ್ನ ದೇಶ" ಅಭಿಯಾನಕ್ಕೆ ಚಾಲನೆ ನೀಡಿ, ನಂತರ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು.

ದೇಶದ ಪ್ರಧಾನಿಗಳಾದ ನರೇಂದ್ರ ಮೋದಿ ಅವರ ಅಪೇಕ್ಷೆಯಂತೆ "ನನ್ನ ಮಣ್ಣು ನನ್ನ ದೇಶ" ಪರಿಕಲ್ಪನೆಯಲ್ಲಿ ದೇಶದ ಭಕ್ತಿಯನ್ನು ದೇಶದ ಮೂಲೆಮೂಲೆಗೆ ಪಸರಿಸಬೇಕು. ಯುವ ಪೀಳಿಗೆಗೆ ದೇಶದ ಮಣ್ಣಿನ ಸತ್ವವನ್ನೂ ಪ್ರತಿ ಮನೆಗೆ, ಯುವಶಕ್ತಿಗೆ ತಲುಪಿಸಬೇಕು ಎಂಬುದು ಮೋದಿಯವರ ಕನಸು. ಇದರ ಜೊತೆ ಜೊತೆಗೆ ದೇಶದ ಸೇನಾನಿಗಳು, ದೇಶದ ಸೈನಿಕರು ದೇಶಕ್ಕೆ ಮಾಡಿದ ತ್ಯಾಗವನ್ನು, ಸ್ವಾತಂತ್ರ್ಯ ಹೋರಾಟ ಸ್ಮರಿಸಬೇಕು. ಸ್ವಾತಂತ್ರ್ಯ ಹೋರಾಟಗಾರರ, ಸೇನಾನಿಗಳ ಸಮರ್ಪಣಾಭಾವಕ್ಕಾಗಿ, ಅಮೃತ ಮಹೋತ್ಸವದ ಅಂಗವಾಗಿ ದೆಹಲಿಯಲ್ಲಿ "ಅಮೃತ ವನ" ನಿರ್ಮಿಸಲಾಗುತ್ತಿದೆ. ಗೌರವಯುತವಾಗಿ ದೇಶದ ಪ್ರತಿ ಮೂಲೆಯ ಭೂತಾಯಿ ಮಣ್ಣನ್ನು ತರಿಸಿ ಉದ್ಯಾನ ನಿರ್ಮಾಣ ಮಾಡಿ ವಿಶ್ವಕ್ಕೆ ಸಮರ್ಪಣೆ ಮಾಡುವ ಕಾರ್ಯಕ್ರಮ ಇದಾಗಿದೆ ಎಂದರು.

ದೇಶದ ರಕ್ಷಣೆಯಲ್ಲಿ ಭಾಗವಹಿಸಿದ ಸೇನಾನಿಗಳು, ಸೈನಿಕರು, ಪೊಲೀಸರು, ಪ್ಯಾರಾ ಮಿಲಿಟರಿ ಸೇರಿದಂತೆ ಇಡೀ ಜಿಲ್ಲೆಯ ಸೇನಾನಿಗಳ ಮನೆಗಳಿಗೆ ಭೇಟಿ ನೀಡಿ, ದೇಶಕ್ಕಾಗಿ ಹೋರಾಟ ಮಾಡಿದ ಅವರ ಅನುಭವಗಳನ್ನು ಹಂಚಿಕೊಳ್ಳಲಾಗುವುದು. ದೇಶಭಕ್ತಿಯನ್ನು ಈ ದೇಶದ ಪ್ರತಿ ಯುವಕರಿಗೆ ಮುಟ್ಟುವ ರೀತಿಯಲ್ಲಿ ಭಾರತಾಂಭೆಯ ಈ ಮಣ್ಣನ್ನು ದೆಹಲಿಯಲ್ಲಿ ಇಡೀ ದೇಶದ ಪ್ರತಿ ಮೂಲೆಯಿಂದ ಮಣ್ಣು ಶೇಖರಿಸಿ ದೇಶದ ವೀರ ಯೋಧರ ಅಮೃತ ವನದಲ್ಲಿ ಸೇರಿಸಲಾಗುವುದು ಎಂದರು.

ವಿಧಾನಪರಿಷತ್ ಸದಸ್ಯ ಕೆ.ಎಸ್.ನವೀನ್ ಮಾತನಾಡಿ, ಚಿತ್ರದುರ್ಗ ನಗರದ ಜೆಸಿಆರ್ ಬಡಾವಣೆಯ ಗಣಪತಿ ದೇಗುಲ ಪುಣ್ಯ ಸ್ಥಳದಿಂದ "ನನ್ನ ಮಣ್ಣು ನನ್ನ ದೇಶ" ಅಭಿಯಾನಕ್ಕೆ ಚಾಲನೆ ನೀಡಲಾಗಿದ್ದು, ಈ ಪವಿತ್ರವಾದ ಮಣ್ಣನ್ನು ಜಿಲ್ಲೆಯ ಹಳ್ಳಿ ಹಳ್ಳಿಗಳಿಂದ, ಪವಿತ್ರ ಸ್ಥಳಗಳಿಂದ, ದೇವಸ್ಥಾನಗಳಿಂದ, ದೇಶಕ್ಕಾಗಿ ಪ್ರಾಣ ಸಮರ್ಪಣೆ, ದೇಶಕ್ಕಾಗಿ ಸೇವೆ ಸಲ್ಲಿಸಿದ ಯೋಧರ ಮನೆಗಳಿಂದ ಪವಿತ್ರ ಮಣ್ಣನ್ನು ಸಂಗ್ರಹ ಮಾಡಿ ಸುಮಾರು 45 ದಿನಗಳ ಕಾಲ ಅಭಿಯಾನ ಜಿಲ್ಲೆಯಲ್ಲಿ ನಡೆಯಲಿದೆ. ಇದೇ ರೀತಿಯಾದ ಅಭಿಯಾನ ಈಗಾಗಲೇ ರಾಜ್ಯ ಹಾಗೂ ದೇಶದಲ್ಲಿ ನಡೆಯುತ್ತಿದೆ. ಅಕ್ಟೋಬರ್ ಮೂರನೇ ವಾರದಲ್ಲಿ ಬೆಂಗಳೂರಿಗೆ ಪವಿತ್ರ ಮಣ್ಣನ್ನು ತಲುಪಿಸಿ, ಅಲ್ಲಿಂದ ಅಕ್ಟೋಬರ್ 25ರಂದು ನವದೆಹಲಿಗೆ ತಲುಪಿಸಿ, ನವದೆಹಲಿಯಲ್ಲಿ ನಿರ್ಮಾಣ ಮಾಡಲಿರುವ ಅಮೃತ ವನವನ್ನು 75 ವರ್ಷಗಳ ಸ್ವಾತಂತ್ರ್ಯದ ಆಚರಣೆಯನ್ನು ದೇಶದ ಯೋಧರಿಗೆ, ದೇಶಕ್ಕಾಗಿ ಹೋರಾಟ ಮಾಡಿದವರಿಗೆ ಸಮರ್ಪಣೆ ಮಾಡುವ ನಿಟ್ಟಿನಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಅಕ್ಟೋಬರ್ 30ರಂದು ನವದೆಹಲಿಯ ಕರ್ತವ್ಯ ಪಥದಲ್ಲಿ ಅಮೃತ ವನವನ್ನು ದೇಶಕ್ಕೆ ಸಮರ್ಪಣೆ ಮಾಡಲಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಜೆಸಿಆರ್ ಬಡಾವಣೆಯ ಗಣಪತಿ ದೇಗುಲದ ಪದಾಧಿಕಾರಿಗಳು, ಮುಖಂಡರು ಇದ್ದರು.

ಚಿತ್ರದುರ್ಗ ಪ್ಲಾಸ್ಟಿಕ್ ಮುಕ್ತ ನಗರ ಮಾಡೋಣ

» ಚಿತ್ರದುರ್ಗ

ಚಿತ್ರದುರ್ಗ ನಗರವನ್ನು ಪ್ಲಾಸ್ಟಿಕ್ ಮುಕ್ತ, ಸ್ವಚ್ಛ, ಹಸಿರು ನಗರವನ್ನಾಗಿಸುವ ಗುರಿಯಿಟ್ಟುಕೊಂಡಿದ್ದು, ಸಾರ್ವಜನಿಕರು ನಗರಸಭೆಯೊಂದಿಗೆ ಕೈಜೋಡಿಸುವಂತೆ ನಗರಸಭೆ ಪೌರಾಯುಕ್ತರಾದ ರೇಣುಕ ಮನವಿ ಮಾಡಿದರು.

ಜಿಲ್ಲಾಡಳಿತ, ನಗರಸಭೆ ವತಿಯಿಂದ ಪೌರ ಕಾರ್ಮಿಕರು, ಚಾಲಕರು, ಸ್ಯಾನಿಟರಿ ಸೂಪರ್‌ವೈಸರ್, ಇತರೆ ಸಿಬ್ಬಂದಿಗಳಿಗೆ ಘನ ತ್ಯಾಜ್ಯ ಹಸಿ ಕಸ ಮತ್ತು ಒಣ ಕಸ ಬೇರ್ಪಡಿಸುವ ಕುರಿತು ನಗರಸಭೆ ಸಭಾಂಗಣದಲ್ಲಿ ಮಂಗಳವಾರ ಹಮ್ಮಿಕೊಳ್ಳಲಾಗಿದ್ದ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಪ್ರತಿ ವರ್ಷವೂ ಒಂದಲ್ಲ ಒಂದು ರೀತಿಯಲ್ಲಿ ತರಬೇತಿಯನ್ನು ನೀಡಲಾಗುತ್ತಿದೆ. ಆದರೆ ಮನೆ ಮನೆಗೆ ಹೋಗಿ ಹಸಿ ಕಸ ಒಣ ಕಸ ಸಂಗ್ರಹಿಸುವವರು ನೀವುಗಳು ಮೊದಲು ಕಾನೂನು ಸರಿಯಾಗಿ ತಿಳಿದುಕೊಂಡಾಗ ಸಾರ್ವಜನಿಕರಲ್ಲಿ ಅರಿವು ಮೂಡಿಸಬಹುದು. ಕಸವನ್ನು ರಸ್ತೆಗೆ ತಂದು ಸುರಿಯಬಾರದು. ಕಸ ವಿಲೇವಾರಿ ಮಾಡುವುದು ಕೇವಲ ನಗರಸಭೆ ಕೆಲಸವಲ್ಲ. ಸಾರ್ವಜನಿಕರ ಜವಾಬ್ದಾರಿ ಕೂಡು ಬಹಳಷ್ಟಿದೆ ಎನ್ನುವುದನ್ನು ಮನವರಿಕೆ ಮಾಡಿ ಇಲ್ಲದಿದ್ದರೆ ದಂಡ ವಿಧಿಸುವ ಅವಕಾಶವಿದೆ ಎಂದು ಹೇಳಿದರು.

ಹಾಸನದ ಕ್ಲಿಯರಿನ್ ಸಂಸ್ಥೆ ಸಿ.ಇ.ಓ. ಚಂದ್ರಶೇಖರ್ ಹಸಿಕಸ ಮತ್ತು ಒಣ ಕಸವನ್ನು ಸಂಗ್ರಹಿಸುವ ಕುರಿತು ಪೌರ ಕಾರ್ಮಿಕರು, ಚಾಲಕರು, ಸ್ಯಾನಿಟರಿ ಸೂಪರ್‌ವೈಸರ್ ಇತರೆ ಸಿಬ್ಬಂದಿಗಳಿಗೆ ಅರಿವು ಮೂಡಿಸಿ ಹಸಿಕಸವನ್ನು ಗೊಬ್ಬರವಾಗಿಸುವ ಬಕೆಟ್ ಪ್ರದರ್ಶಿಸಿ ಮಾತನಾಡುತ್ತ ಇದನ್ನು ಪ್ರತಿ ಮನೆಗಳಲ್ಲಿ ಉಪಯೋಗಿಸಿದರೆ ಕಸವನ್ನು ವಿಂಗಡಿಸುವ ಸಮಸ್ಯೆಯೇ ಎದುರಾಗುವುದಿಲ್ಲ. ಸಾಧ್ಯವಾದಷ್ಟು ಪ್ಲಾಸ್ಟಿಕ್ ಬಳಕೆಯನ್ನು ನಿಯಂತ್ರಿಸಬೇಕು. ಏಕೆಂದರೆ ಅದು ಮಣ್ಣಿನಲ್ಲಿ ಕೊಳೆಯುವುದಿಲ್ಲ. ಪರಿಸರಕ್ಕೆ ಹಾನಿಯುಂಟು ಮಾಡುತ್ತದೆ ಎಂದು ತಿಳಿಸಿದರು.

ಪರಿಸರ ಇಂಜಿನಿಯರ್ ಜಾಫರ್ ಮಾತನಾಡಿ ಹಸಿ ಕಸ ಒಣ ಕಸವನ್ನು ಯಾರು ಬೇರ್ಪಡಿಸಿ ನಗರಸಭೆ ವಾಹನಕ್ಕೆ ಹಾಕುವುದಿಲ್ಲವೋ ಅಂತಹವರ ಪಟ್ಟಿ ಮಾಡಿಕೊಂಡು ಬನ್ನಿ ದಂಡ ವಿಧಿಸುವ ಮೂಲಕ ಜಾಗೃತರನ್ನಾಗಿಸೋಣ. ಶೆಲ್, ಟ್ಯೂಬ್‌ಲೈಟ್, ಮೊಬೈಲ್ ಚಾರ್ಜರ್ ಇವುಗಳನ್ನು ಹಸಿ ಕಸದ ಜೊತೆ ಸೇರಿಸದೆ ಪ್ರತ್ಯೇಕವಾಗಿ ಕಸ ಸಂಗ್ರಹಿಸುವ ವಾಹನಕ್ಕೆ ಹಾಕುವಂತೆ ಅರಿವು ಮೂಡಿಸಿ ಎಂದು ಪೌರ ಕಾರ್ಮಿಕರು, ಚಾಲಕರು, ಸ್ಯಾನಿಟರಿ ಸೂಪರ್‌ವೈಸರ್ ಇವರುಗಳಿಗೆ ತಾಕೀತು ಮಾಡಿದರು. ಆರೋಗ್ಯ ನಿರೀಕ್ಷಕರುಗಳಾದ ಸರಳ, ಭಾರತಿ, ನಿರ್ಮಲ, ನಾಗರಾಜ್, ಬಸವರಾಜ್ ಇವರುಗಳು ತರಬೇತಿ ಕಾರ್ಯಾಗಾರದಲ್ಲಿ ಭಾಗವಹಿಸಿದ್ದರು.

ಕುರಿಕಾಯುವ ಯೋಗೇಶಗೆ ಒಲಿದು ಬಂದ ಶಿಕ್ಷಣ ಭಾಗ್ಯ

ಸಿಎಂ ಸೂಚನೆಯಂತೆ ಶಾಲೆಗೆ ಪ್ರವೇಶ

» ಚಳ್ಳಕೆರೆ

ಬಡತನದ ಹಿನ್ನೆಲೆಯಲ್ಲಿ ಹೆತ್ತತಂದೆಯೇ ತನ್ನ ಮಗನನ್ನು ಶಾಲೆಗೆ ಕಳಿಸುವ ಬದಲು ಕುರಿ ಕಾಯಲು ಕಳಿಸಿದ ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ವರದಿಯಾಗಿದ್ದು, ವರದಿಯನ್ನು ವೀಕ್ಷಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಹುಡುಗನನ್ನು ಶಾಲೆಗೆ ಸೇರಿಸಿಕೊಳ್ಳುವಂತೆ ಟ್ವಿಟ್ ಮೂಲಕ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದ ಬೆನ್ನ ಹಿಂದೆಯೇ ಗ್ರಾಮದ ಶಾಲೆಯ ಮುಖ್ಯ ಶಿಕ್ಷಕ, ಶಿಕ್ಷಕರು ಹುಡುಗನನ್ನು ಹುಡುಕಿ ಕರೆತಂದು ಶಾಲೆಗೆ ಸೇರಿಸಿಕೊಂಡಿದ್ದಾರೆ.

ತಾಲ್ಲೂಕಿನ ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಒಬಳಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬಸಾಪುರ ಗ್ರಾಮದ ಮಂಜುನಾಥ ಎಂಬುವವರ ಪುತ್ರ ಯೋಗೇಶ್(11)ನನ್ನು ಶಾಲೆಗೆ ಕಳಿಸದೆ ಪ್ರತಿನಿತ್ಯ ಅವನನ್ನು ಕುರಿ ಕಾಯಲು ತಂದೆ ತಿಳಿಸುತ್ತಿದ್ದ. ತಂದೆಯ ಸೂಚನೆ ಮೇರೆಗೆ ಯೋಗೇಶ್ ಶಾಲೆಗೆ ಹೋಗದೆ ಪ್ರತಿನಿತ್ಯ ಕುರಿಗಳನ್ನು ಗ್ರಾಮಕ್ಕೆ ಹೊಂದಿಕೊಂಡಿರುವ ಜಮೀನುಗಳಲ್ಲಿ ಕುರಿಗಳನ್ನು ಮೇಯಿಸುತ್ತಿದ್ದ. ಬೆಳಗ್ಗೆಯಿಂದ ಸಂಜೆತನಕ ಕುರಿಗಳನ್ನು ಕಾಯುವ ಕೆಲಸವಾಗಿತ್ತು.

ಶಿಕ್ಷಣವನ್ನು ಕಲಿತು ಸಮಾಜಕ್ಕೆ ಏನಾದರೂ ಕೊಡುಗೆ ನೀಡುವ ಸಾಮರ್ಥ್ಯ ಹೊಂದಿರುವ ಯೋಗೇಶ್ ತಂದೆಯ ಮಾತಿಗೆ ಎದುರಾಡದೆ ಕುರಿ ಕಾಯುತ್ತಿದ್ದ ಬಗ್ಗೆ ಮಾಹಿತಿ ಪಡೆದು ಕೊಂಡ ಗ್ರಾಮದ ಯುವಕ ಮಹೇಂದ್ರ ಕೂಡಲೇ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಟ್ವಿಟರ್ ಮೂಲಕ ಮಾಹಿತಿ ನೀಡಿ ಯೋಗೇಶಗೆ ಶಿಕ್ಷಣದ ವ್ಯವಸ್ಥೆ ಕಲ್ಪಿಸುವಂತೆ ಮನವಿ ಮಾಡಿದ್ದ. ಟ್ವಿಟರ್‌ನಲ್ಲಿ ಮಾಹಿತಿ ಪಡೆದ ಸಿದ್ದರಾಮಯ್ಯ ಕೇವಲ ಕೆಲವೇ ಗಂಟೆಗಳಲ್ಲಿ ಸಂಬಂಧಪಟ್ಟ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿ ವಿದ್ಯಾರ್ಥಿ ಯೋಗೇಶನನ್ನು ಶಾಲೆಗೆ ಸೇರಿಸಿಕೊಳ್ಳುವಂತೆ ಆದೇಶಿಸಿದರು. ಗ್ರಾಮದ ಸರ್ಕಾರಿ ಹಿರಿಯಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕ ಹನುಮಂತಪ್ಪ, ಸಹ ಶಿಕ್ಷಕಿ ಪುಷ್ಪಲತಾ ವಿದ್ಯಾರ್ಥಿಯನ್ನು ತಮ್ಮ ಶಾಲೆಯ 6ನೇ ತರಗತಿಗೆ ಸೇರ್ಪಡೆ ಮಾಡಿಕೊಂಡರಲ್ಲದೆ, ಕೂಡಲೇ ವಿದ್ಯಾರ್ಥಿಗೆ ಸಮವಸ್ತ್ರ, ಪಠ್ಯಪುಸ್ತಕ ಇತರೆ ಸಾಮಗ್ರಿಗಳನ್ನು ವಿತರಿಸಿದರು.

ಉರಿಯುವ ಬಿಸಿಲಿನಲ್ಲಿ ಇಡೀ ದಿನ ಕೈಯಲ್ಲಿ ಕೋಲಿಡಿದು ಕುರಿಗಳನ್ನು ಕಾಯುತ್ತಿದ್ದ ಯೋಗೇಶ್ ಈಗ ಸಮವಸ್ತ್ರ, ಪುಸ್ತಕ ಜೊತೆಯಲ್ಲಿ ಶಾಲೆಗೆ ತೆರಳುವಂತವನಾಗಿದ್ದಾನೆ.

ಕೃಷ್ಣ ಜನ್ಮಾಷ್ಟಮಿ: ಯಶೋಧ, ಕೃಷ್ಣ ಛದ್ಮವೇಷ ಸ್ಪರ್ಧೆ

» ಚಳ್ಳಕೆರೆ

ಶ್ರೀಕೃಷ್ಣ ಜನ್ಮಾಷ್ಟಮಿ ಹಿನ್ನೆಲೆಯಲ್ಲಿ ನಗರದ ಇಂಡಸ್ ವ್ಯಾಲಿ ಮತ್ತು ವಾಗ್ದೇವಿ ಶಾಲೆಯ ಮಕ್ಕಳಿಗೆ ಯಶೋಧ–ಕೃಷ್ಣ ಛದ್ಮವೇಷ ಸ್ಪರ್ಧೆಯನ್ನು ಏರ್ಪಸಿದ್ದು, ನಿವೃತ್ತ ಪ್ರಾಂಶುಪಾಲ ಬಿ.ವಿ.ಸಿರಿಯಣ್ಣ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಮಕ್ಕಳಿಗೆ ಯಶೋಧ, ಕೃಷ್ಣನ ವೇಷವನ್ನು ಧರಿಸುವಷ್ಟೇಯಲ್ಲ, ಅವರಿಗೆ ಇವರಿಬ್ಬರ ಬಗ್ಗೆ ಸೂಕ್ತ ಮಾಹಿತಿಯನ್ನು ನೀಡಿ ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವಂತೆ ಮಾಡ ಬೇಕು ನಮ್ಮ ಸಂಸ್ಕೃತಿ ಮತ್ತು ಸಂಸ್ಕಾರವನ್ನು ಎತ್ತಿಹಿಡಿಯುವ ಕೆಲಸ ನಿರಂತರವಾಗಿ ಸಾಗಬೇಕು ಎಂದರು.

ಕಾರ್ಯದರ್ಶಿ ಟಿ.ಚಿಕ್ಕಣ್ಣ ಮಾತನಾಡಿ, ನಮ್ಮ ಶಾಲೆಯಲ್ಲಿ ಪ್ರತಿವರ್ಷ ಶಿಕ್ಷಣದ ಜೊತೆಯಲ್ಲಿ ಇಂತಹ ಹಲವಾರು ಪಠ್ಯೇತರ ಚಟುವಟಿಕೆ ನಡೆಸಲಾಗುತ್ತದೆ. ಶಿಕ್ಷಕರ ಮಾರ್ಗದರ್ಶನದಲ್ಲಿ ಪೋಷಕರು ಈ ಕಾರ್ಯಕ್ರಮಕ್ಕೆ ತಮ್ಮ ಮಕ್ಕಳನ್ನು ಅಣಿಗಳಿಸುವ ಮೂಲಕ ಸಹಕಾರ ನೀಡುತ್ತಾರೆ. ಇದರಿಂದ ಮಕ್ಕಳಲ್ಲಿ ಹೆಚ್ಚು ಕ್ರಿಯಾಶೀಲತೆ ಉಂಟಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಶಶಿಧರ ದಳವಾಯಿ, ತಿಪ್ಪೇಸ್ವಾಮಿ, ಚಂದ್ರಕಲಾ, ಎಚ್.ಮಹಲಿಂಗಪ್ಪ, ಈರಣ್ಣ, ಶಿಕ್ಷಕರಾದ ಸುಷ್ಮಿತಾ, ಪುಷ್ಪ, ಚಂದನ, ಶಿರಿಶ ಮುಂತಾದವರು ಉಪಸ್ಥಿತರಿದ್ದರು.

ಪ್ರಮುಖ ಸುದ್ದಿ

ಶ್ರಾವಣ ಮಾಸದ ಪ್ರಯುಕ್ತ ವಚನಾಮೃತ ಕಾರ್ಯಕ್ರಮ

» ಹೊಳಲ್ಕೆರೆ

ಎಂಟು ನೂರು ವರ್ಷಗಳ ಹಿ

ಫಾಸ್ಟ್ ನ್ಯೂಸ್

ಜಯ ಕರ್ನಾಟಕ ಜನಪರ ವೇದಿಕೆ ಜಿಲ್ಲಾಧ್ಯಕ್ಷರಾಗಿ ಬಿ.ಟಿ.ರಾಜೇಂದ್ರ ನೇಮಕ



» ಚಿತ್ರದುರ್ಗ

ಜಯ ಕರ್ನಾಟಕ ಜನಪರ ವೇದಿಕೆಯ ಚಿತ್ರದುರ್ಗ ಜಿಲ್ಲಾ ನೂತನ ಅಧ್ಯಕ್ಷರಾಗಿ ಬಿ.ಟಿ.ರಾಜೇಂದ್ರರವರನ್ನು ಆಯ್ಕೆ ಮಾಡಲಾಗಿದೆ. ಬೆಂಗಳೂರಿನ ಟೌನ್ ಹಾಲ್‌ನಲ್ಲಿ ನಡೆದ ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ಜಯಕರ್ನಾಟಕ ಜನಪರ ವೇದಿಕೆಯ ಸಂಸ್ಥಾಪಕ ಅಧ್ಯಕ್ಷ ಬಿ.ಗುಣರಂಜನ್‌ಶೆಟ್ಟಿ ನೇಮಕಗೊಳಿಸಿ ಆದೇಶ ಪತ್ರ ನೀಡಿದರು. ನೂತನ ರಾಜ್ಯಾಧ್ಯಕ್ಷ ಶ್ರೀನಿವಾಸ್, ಉಪಾಧ್ಯಕ್ಷ ಕುಮಾರಸ್ವಾಮಿ, ಸಲಹೆಗಾರ ಚಂದ್ರಪ್ಪ ಈ ಸಂದರ್ಭದಲ್ಲಿ ಹಾಜರಿದ್ದರು.

ಅಭಿಯಾನಕ್ಕೆ ಟ್ರೀ ಗಾರ್ಡ್ ಕೊಡುಗೆ ನೀಡುವ ಮೂಲಕ ರಘುಲಾಲ್ ಸಂಸ್ಥೆ ಸಾಥ್

ಮೈಸೂರು ಜಿಲ್ಲೆ ಟಿ.ನರಸೀಪುರ ಸರ್ಕಾರಿ ಶಾಲಾ ಆವರಣದಲ್ಲಿನ ಗಿಡಗಳಿಗೆ ರಘುಲಾಲ್ ಔಷಧ ಸಂಸ್ಥೆ ರಾಘವನ್‌ರಿಂದ ಟ್ರೀ ಗಾರ್ಡ್ ಕೊಡುಗೆ. ಪರಿಸರ ಸಂರಕ್ಷಣೆಗಾಗಿ 'ಮೈ ಇಂಡಿಯಾ ಮೈ ಗೋಲ್' ಅಭಿಯಾನದಡಿ ದೇಶಾದ್ಯಂತ ಸರ್ಕಾರಿ ಶಾಲಾ ಆವರಣದಲ್ಲಿ ಕೇಂದ್ರ ಇಲಾಖೆ ಸಹಯೋಗದಲ್ಲಿ ಟಿವಿ9 ನೆಟ್‌ವರ್ಕ್‌ನಿಂದ ಗಿಡ ನೆಡುವ ಅಭಿಯಾನ ಮಾಡುತ್ತಿದೆ.

ಕ್ಯಾಂಟರ್ ವಾಹನ ಹರಿದು ಪೌರ ಕಾರ್ಮಿಕ ಸ್ಥಳದಲ್ಲೇ ಸಾವು

ಬೆಂಗಳೂರಿನ ಟಿ.ದಾಸರಹಳ್ಳಿಯ ಕೆರೆ ರಸ್ತೆಯಲ್ಲಿ ಕ್ಯಾಂಟರ್ ವಾಹನ ಹರಿದು ಪೌರ ಕಾರ್ಮಿಕ ಸ್ಥಳದಲ್ಲೇ ಮೃತಪಟ್ಟಿದ್ದಾನೆ. ಪೌರ ಕಾರ್ಮಿಕ ಗಂಗಾಧರ(50) ಮೃತ ದುರ್ದೈವಿ. ಅಪಘಾತದ ಬಳಿಕ ಸ್ಥಳದಲ್ಲೇ ಕ್ಯಾಂಟರ್ ನಿಲ್ಲಿಸಿ ಚಾಲಕ ಪರಾರಿಯಾಗಿದ್ದಾನೆ. ಪೀಣ್ಯ ಸಂಚಾರಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

ಹೈಕೋರ್ಟ್ ಅಸಿಂಧು ತೀರ್ಪು ಪ್ರಶ್ನಿಸಿ ಸುಪ್ರೀಂಗೆ ಪ್ರಜ್ವಲ್ ರೇವಣ್ಣ ಅರ್ಜಿ

ಸಂಸದರಾಗಿ ಪ್ರಜ್ವಲ್ ರೇವಣ್ಣ ಆಯ್ಕೆಯನ್ನು ಹೈಕೋರ್ಟ್ ಅಸಿಂಧುಗೊಳಿಸಿದೆ. ಹೈಕೋರ್ಟ್ ತೀರ್ಪು ಪ್ರಶ್ನಿಸಿ ಸುಪ್ರೀಂ ಕೋರ್ಟ್ ಗೆ ಅರ್ಜಿ ಸಲ್ಲಿಸಲು ಪ್ರಜ್ವಲ್ ರೇವಣ್ಣ ಮುಂದಾಗಿದ್ದಾರೆ. ಇನ್ನು ಒಂದೆರಡು ದಿನಗಳಲ್ಲಿ ಸುಪ್ರೀಂ ಕೋರ್ಟ್ ಗೆ ಮೇಲ್ಮನವಿ ಸಲ್ಲಿಸಲಿದ್ದಾರೆ. ಹೈಕೋರ್ಟ್ ತನ್ನ ತೀರ್ಪಿಗೆ ತಡೆ ನೀಡಲು ನಿರಾಕರಿಸಿರುವ ಹಿನ್ನೆಲೆಯಲ್ಲಿ ಶೀಘ್ರ ಸುಪ್ರೀಂ ಕೋರ್ಟ್ ಮೊರೆ ಹೋಗಲಿದ್ದಾರೆ.

ರಟ್ಟಿಹಳ್ಳಿಯ ಶ್ರೀ ಹೊಳಿಸಾಲ ದುರ್ಗಾದೇವಿ, ಶ್ರೀ ಮಾರಿಕಾಂಬಾದೇವಿ ಅಮ್ಮನವರಿಗೆ ಶ್ರಾವಣ ಮಾಸದ ಮಂಗಳವಾರ ದಾವಣಗೆರೆಯ ಶ್ರೀಮತಿ ಆಶಾ ಶ್ರೀ ಎನ್. ವಿನೋದ್‌ಕುಮಾರ್ ಸಾಲಂಕಿ ಮತ್ತು ಕುಟುಂಬದವರು ಪುಷ್ಪಾಲಂಕಾರದ ಸೇವೆಯನ್ನು ನೆರವೇರಿಸಿದರು.

ಅಧಿಕಾರಿಗಳೊಂದಿಗೆ ಜಿಲ್ಲಾಧಿಕಾರಿ ಪೂರ್ವಭಾವಿ ಸಭೆ

ಪಿಓಪಿ ಗಣೇಶ ಮೂರ್ತಿಗಳ ಬಳಕೆ ಬಗ್ಗೆ ನಿಗಾ ವಹಿಸಲು ತಂಡ ರಚನೆ: ದಿವ್ಯಪ್ರಭು

» ಚಿತ್ರದುರ್ಗ

ಜಿಲ್ಲೆಯಲ್ಲಿ ಈ ಬಾರಿ ಗಣೇಶ ಹಬ್ಬವನ್ನು ಸರ್ಕಾರದ ಮಾರ್ಗಸೂಚಿ ಪಾಲನೆಯೊಂದಿಗೆ ಭಕ್ತಿಪೂರ್ವಕ, ಸೌಹಾರ್ದಯುತ ಹಾಗೂ ಪರಿಸರ ಸ್ನೇಹಿಯಾಗಿ ಆಚರಿಸುವಂತಾಗಲು ವಿವಿಧ ಇಲಾಖೆ ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯ ನಿರ್ವಹಿಸಬೇಕು, ಈ ನಿಟ್ಟಿನಲ್ಲಿ ಪಿಓಪಿ ಗಣೇಶ ಮೂರ್ತಿಗಳ ಬಳಕೆ ಬಗ್ಗೆ ನಿಗಾ ವಹಿಸಲು ವಿವಿಧ ಇಲಾಖೆ ಅಧಿಕಾರಿಗಳನ್ನೊಳಗೊಂಡ ತಂಡ ರಚಿಸಲಾಗುವುದು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಅವರು ಹೇಳಿದರು.

ಗೌರಿ–ಗಣೇಶ ಹಬ್ಬದ ಆಚರಣೆಗೆ ಸಂಬಂಧಿಸಿದಂತೆನಗರದಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ವಿವಿಧ ಇಲಾಖೆ ಅಧಿಕಾರಿಗಳೊಂದಿಗೆ ಏರ್ಪಡಿಸಲಾಗಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗಣೇಶ ಹಬ್ಬದ ಆಚರಣೆಯ ಸಂದರ್ಭದಲ್ಲಿ ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ, ಕೋಮುಭಾವನೆಗಳಿಗೆ ಧಕ್ಕೆಯಾಗದಂತೆ ಶಾಂತಿ ಸೌಹಾರ್ದಯುತವಾಗಿ ಗಣೇಶ ಹಬ್ಬ ಆಚರಣೆ ಅನುವು ಮಾಡಿಕೊಡಬೇಕು. ಪರಿಸರಕ್ಕೆ ಹಾನಿಕಾರಕವಾಗಿರುವ ಪಿಓಪಿ ಮತ್ತು ಲೋಹ ಮಿಶ್ರಿತ ಬಣ್ಣದಿಂದ ತಯಾರಿಸಿದ ವಿಗ್ರಹಗಳ ಬಳಕೆಯನ್ನು ನಿಷೇಧಿಸಲಾಗಿದ್ದು, ಪರಿಸರಕ್ಕೆ ಹಾನಿಕಾರವಾಗುವ ಇಂತಹ ವಿಗ್ರಹಗಳ ಮಾರಾಟ ಹಾಗೂ ಬಳಕೆಗೆ ಅವಕಾಶ ನೀಡಬಾರದು. ಈ ನಿಟ್ಟಿನಲ್ಲಿ ಜಿಲ್ಲೆಯಾದ್ಯಂತ ನಿಗಾ ವಹಿಸಿ, ಪಿಓಪಿ ಗಣೇಶ ವಿಗ್ರಹಗಳ ಮಾರಾಟ ಹಾಗೂ ಬಳಕೆ ಕುರಿತಂತೆ ನಿಗಾ ವಹಿಸಿ, ಕ್ರಮ ಕೈಗೊಳ್ಳಲು ಪರಿಸರ ಅಧಿಕಾರಿಗಳು, ಪೊಲೀಸ್ ಇಲಾಖೆ, ಕಂದಾಯ ಇಲಾಖೆ ಹಾಗೂ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳನ್ನು ಒಳಗೊಂಡಂತೆ ತಂಡವನ್ನು ರಚಿಸಲಾಗುವುದು. ತಂಡವು ಜಿಲ್ಲೆಯಾದ್ಯಂತ ಸಂಚರಿಸಿ, ಜನರಲ್ಲಿ ಅರಿವು ಮೂಡಿಸಬೇಕು, ಪಿಓಪಿ ಗಣೇಶ ವಿಗ್ರಹಗಳ ಮಾರಾಟ ಅಥವಾ ಬಳಕೆ ಕಂಡುಬಂದಲ್ಲಿ ಕೂಡಲೆ ಅದನ್ನು ವಶಪಡಿಸಿಕೊಳ್ಳಬೇಕು. ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಬೇರೆ ಊರುಗಳಿಂದ ಮತ್ತು ರಾಜ್ಯಗಳಿಂದ ಸಾಗಾಣಿಕೆಯಾಗುವಂತಹ ಪಿಓಪಿ ವಿಗ್ರಹಗಳನ್ನು ತಡೆಗಟ್ಟಲು ಚೆಕ್‌ಪೋಸ್ಟ್ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಬೇಕು. ನಿರ್ದಿಷ್ಟ ಪ್ರದೇಶದಲ್ಲಿ ಸ್ಥಾಪಿಸಲಾಗುವ ಸಾರ್ವಜನಿಕ ಗಣಪತಿಗಳನ್ನು ವಿಲೇವಾರಿ ಮಾಡಲು ನಿರ್ದಿಷ್ಟ ಜಲಮೂಲಗಳನ್ನು ನಿಗದಿಪಡಿಸಬೇಕು, ಗಣೇಶಮೂರ್ತಿ ವಿಸರ್ಜನೆ ಮಾಡುವ ಸ್ಥಳಗಳ ಕುರಿತು ಸ್ಥಳೀಯವಾಗಿ ಸಾರ್ವಜನಿಕರಿಗೆ ವ್ಯಾಪಕ ಪ್ರಚಾರ ನೀಡಬೇಕು, ಪರಿಸರಕ್ಕೆ ಹಾನಿಯುಂಟು ಮಾಡುವ ವಿಗ್ರಹಗಳನ್ನು ಜಲಮೂಲಗಳಲ್ಲಿ ವಿಸರ್ಜನೆಗೆ ಅವಕಾಶ ನೀಡಬಾರದು ಎಂದರು. ಅಲ್ಲದೆ ಸಾರ್ವಜನಿಕರು ಪಿಓಪಿ ಹಾಗೂ ರಾಸಾಯನಿಕ ಮಿಶ್ರಿತ ಗಣೇಶ ಮೂರ್ತಿಗಳನ್ನು ಬಳಸದೆ, ಪರಿಸರ ಸ್ನೇಹಿಯಾಗಿರುವ ಮಣ್ಣಿನ ಮತ್ತು ನೈಸರ್ಗಿಕ ಬಣ್ಣ ಲೇಪಿತ ಗಣೇಶ ಮೂರ್ತಿಗಳನ್ನು ಮಾತ್ರ ಬಳಸುವಂತೆ ಜಿಲ್ಲಾಧಿಕಾರಿಗಳು ಮನವಿ ಮಾಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದ್ರ ಕುಮಾರ್ ಮೀನಾ ಅವರ ಮಾತನಾಡಿ, ಜಿಲ್ಲೆಯಲ್ಲಿ ಸುಮಾರು 1650 ಗಣೇಶ ಮೂರ್ತಿಗಳನ್ನು ಸಾರ್ವಜನಿಕವಾಗಿ ಸ್ಥಾಪಿಸುವ ಬಗ್ಗೆ ಮಾಹಿತಿ ಇದೆ. ಸಾರ್ವಜನಿಕ ಸ್ಥಳಗಳಲ್ಲಿ ಸ್ಥಾಪಿಸುವಂತಹ ಗಣೇಶ ವಿಗ್ರಹಗಳನ್ನು ಪ್ರತಿ ಸಮಿತಿಯವರು ಕಡ್ಡಾಯವಾಗಿ ಸ್ಥಳೀಯ ಸಂಸ್ಥೆಗಳು ಮತ್ತು ಪೊಲೀಸ್ ಇಲಾಖೆಯಿಂದ ನಿಬಂಧನೆಗೊಳಪಟ್ಟು ಅನುಮತಿ ಪಡೆದ ನಂತರವೇ ಸ್ಥಾಪಿಸಬೇಕಾಗುತ್ತದೆ. ಗಣೇಶ ಮೂರ್ತಿ ಸ್ಥಾಪಿಸುವ ಮುನ್ನ ಎಲ್ಲ ಬಗೆಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು, ಮೆರವಣಿಗೆ ಸಾಗುವ ಮಾರ್ಗಗಳನ್ನು ನಿಗದಿಪಡಿಸುವುದರ ಬಗ್ಗೆಯೂ ಅಧಿಕಾರಿಗಳು ಎಚ್ಚರಿಕೆ ವಹಿಸಬೇಕು. ವಿಗ್ರಹಗಳ ಸ್ಥಾಪನೆ ಅಥವಾ ವಿಸರ್ಜನೆ ಸಂದರ್ಭಕ್ಕೆ ಧ್ವನಿವರ್ಧಕಗಳಿಗೆ ಅನುಮತಿ ನೀಡುವ ಸಂದರ್ಭದಲ್ಲಿ, ಧ್ವನಿವರ್ಧಕಗಳು ನಿಯಮಗಳಿಗೆ ಅನುಗುಣವಾದ ಡೆಸಿಬಲ್ ನಷ್ಟು ಹೊಂದಿವೆಯೇ ಎಂಬುದನ್ನು ಖಾತ್ರಿ ಪಡಿಸಿಕೊಳ್ಳಬೇಕು, ರಾತ್ರಿ 10 ರಿಂದ ಬೆಳಿಗ್ಗೆ 6 ರವರೆಗೆ ಧ್ವನಿವರ್ಧಕಗಳ ಬಳಕೆಯನ್ನು ನಿಷೇಧಿಸಲಾಗಿದ್ದು, ಹಗಲು ವೇಳೆ ಬೆಳಿಗ್ಗೆ 6 ರಿಂದ ರಾತ್ರಿ 10 ರವರೆಗೆ ನಿಗದಿತ ಡೆಸಿಬಲ್ ಪ್ರಮಾಣದಲ್ಲಿ ಮಾತ್ರ ಧ್ವನಿವರ್ಧಕ ಬಳಕೆಗೆ ಅವಕಾಶವಿದೆ. ಪರಿಸರಕ್ಕೆ ಹಾನಿಕಾರಕವಾದ, ಹಾಗೂ ನಿಗದಿತ ಡೆಸಿಬಲ್ ಸೌಂಡ್ ಗಿಂತಲೂ ಹೆಚ್ಚಿನ ಸೌಂಡ್ ಹೊರಸೂಸುವ ಧ್ವನಿವರ್ಧಕಗಳಿಗೆ ಅನುಮತಿ ನೀಡಬಾರದು. ಈ ಬಗ್ಗೆ ಸಂಬಂಧಪಟ್ಟವರಿಂದ ಅಧಿಕಾರಿಗಳು ಮುಚ್ಚಳಿಕೆ ಪತ್ರವನ್ನು ಪಡೆದುಕೊಳ್ಳಬೇಕು. ಗಣೇಶ ಮೂರ್ತಿ ಸ್ಥಾಪಿಸಿದ ನಂತರದ ಮೂರನೆ, ಐದನೇ ಹಾಗೂ ಒಂಭತ್ತನೆ ದಿನಗಳಂದು ವಿಸರ್ಜನೆಯಾಗುವ ಗಣೇಶ ಮೂರ್ತಿಗಳ ಬಗ್ಗೆ ಮಾಹಿತಿ ಪಡೆದುಕೊಂಡು, ಮೆರವಣಿಗೆಗೆ ಸೂಕ್ತ ಮಾರ್ಗಗಳನ್ನು ರೂಪಿಸಬೇಕು. ಮಾರ್ಗಗಳಲ್ಲಿ ಬ್ಯಾರಿಕೇಡಿಂಗ್, ಸಿಸಿ ಟಿ.ವಿ. ಗಳ ಅಳವಡಿಕೆ, ವಿಸರ್ಜನಾ ಸ್ಥಳಗಳಲ್ಲಿ ಸಾಕಷ್ಟು ವಿದ್ಯುತ್ ದೀಪದ ಅಳವಡಿಕೆಯನ್ನು ಮೊದಲೇ ಮಾಡಿಕೊಳ್ಳಬೇಕು, ಮುಂಜಾಗ್ರತಾ ಕ್ರಮವಾಗಿ ಮದ್ಯ ಮಾರಾಟಕ್ಕೆ ನಿಷೇಧ ಜಾರಿಗೊಳಿಸಬೇಕು, ಯಾವುದೇ ಅಹಿತಕರ ಘಟನೆಗಳು ಜರುಗದಂತೆ ಎಚ್ಚರ ವಹಿಸಬೇಕು ಎಂದರು.

ಸಾರ್ವಜನಿಕ ಸ್ಥಳಗಳಲ್ಲಿ ಬ್ಯಾನರ್, ಬಂಟಿಂಗ್, ಧ್ವಜಗಳ ಅಳವಡಿಕೆ ಕೇವಲ ವಿಸರ್ಜನೆ ದಿನಕ್ಕೆ ಮಾತ್ರ ಸೀಮಿತವಾಗಬೇಕು, ಇದಕ್ಕೂ ಮುನ್ನವೇ ಅಳವಡಿಸಲು ಅವಕಾಶವಿಲ್ಲ. ಗಣೇಶ ವಿಸರ್ಜನೆ ದಿನದಂದೇ ಸಂಬಂಧಿಸಿದ ಎಲ್ಲ ಬ್ಯಾನರ್, ಬಂಟಿಂಗ್ಸ್, ಧ್ವಜಗಳನ್ನು ಸಂಬಂಧಪಟ್ಟ ಸಮಿತಿಯವರೇ ತೆರವುಗೊಳಿಸಬೇಕು. ಜಿಲ್ಲೆಯಲ್ಲಿ ಮಹನೀಯರ ಪುತ್ಥಳಿ ಇರುವ ಪ್ರಮುಖ ವೃತ್ತಗಳಲ್ಲಿ ಹೂವಿನ ಅಲಂಕಾರಕ್ಕೆ ಮಾತ್ರ ಅವಕಾಶ ನೀಡಬೇಕು, ವೃತ್ತದ ಸ್ಥಳದಲ್ಲಿ ಯಾವುದೇ ಬ್ಯಾನರ್, ಬಂಟಿಂಗ್, ಧ್ವಜಗಳ ಅಳವಡಿಕೆ ಮಾಡುವಂತಿಲ್ಲ, ಈ ಬಗ್ಗೆ ಪೊಲೀಸ್ ಹಾಗೂ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು ನಿಗಾ ವಹಿಸಬೇಕು. ಒಟ್ಟಾರೆ ಜಿಲ್ಲೆಯಲ್ಲಿ ಜರುಗುವ ಗಣೇಶ ಚತುರ್ಥಿ ಹಬ್ಬದ ಆಚರಣೆಯು ಕಾನೂನು ಸುವ್ಯವಸ್ಥೆ ಪಾಲನೆಯೊಂದಿಗೆ ಆಗಬೇಕು ಎಂದು ಸೂಚನೆ ನೀಡಿದರು.

ಸಭೆಯಲ್ಲಿ ಉಪವಿಭಾಗಾಧಿಕಾರಿ ಕಾರ್ತಿಕ್, ಪರಿಸರ ಅಧಿಕಾರಿ ಪ್ರಕಾಶ್, ನಗರಸಭೆ ಪೌರಾಯುಕ್ತೆ ರೇಣುಕಾ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ಡಿಹೆಚ್‌ಒ ಡಾ. ರಂಗನಾಥ್, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಹೇಂದ್ರ ಕುಮಾರ್ ಸೇರಿದಂತೆ ವಿವಿಧ ವಿಭಾಗಗಳ ಡಿವೈಎಸ್‌ಪಿ ಗಳು, ಪೊಲೀಸ್ ಅಧಿಕಾರಿಗಳು ಉಪಸ್ಥಿತರಿದ್ದರು.

ಚಳ್ಳಕೆರೆ ನಗರ ಮಟ್ಟದ ಹಿರಿಯ ಪ್ರಾಥಮಿಕ ಶಾಲೆಗಳ ಕ್ರೀಡಾಕೂಟ ಪಂದ್ಯ ವಿಜೇತ ಶಾಲೆಗಳಿಗೆ ಅಭಿನಂದನೆ

» ಚಳ್ಳಕೆರೆ

ಚಳ್ಳಕೆರೆ ಕಸಬಾ ನಗರ ಮಟ್ಟದ ಹಿರಿಯ ಪ್ರಾಥಮಿಕ ಶಾಲೆಗಳ ಕ್ರೀಡಾಕೂಟ ಇತ್ತೀಚೆಗೆ ಮುಕ್ತಾಯವಾಗಿದ್ದು, ನಗರದ ಎಸ್‌ಜೆಎಂ, ಆದರ್ಶ, ವಾಸವಿ ಮತ್ತು ಸಹ್ಯಾದ್ರಿ ಶಾಲೆಗಳ ವಿದ್ಯಾರ್ಥಿಗಳು ವಿವಿಧ ಪಂದ್ಯಗಳಲ್ಲಿ ಗೆಲುವು ಸಾಧಿಸಿದ್ದು, ಶಾಲೆಯ ಆಡಳಿತ ಮಂಡಳಿ ಅವರನ್ನು ಅಭಿನಂದಿಸಿದೆ. ನಗರದ ಹಳೇಟೌನ್‌ನ ಎಸ್‌ಜೆಎಂ ಇಂಗ್ಲಿಷ್ ಮೀಡಿಯಂ ಶಾಲೆಯ ಬಾಲಕರು ಖೋ–ಖೋ ಪಂದ್ಯದಲ್ಲಿ ಪ್ರಥಮ, ಆದರ್ಶ ಶಾಲೆಯ ಮಕ್ಕಳು ದ್ವಿತೀಯ ಬಹುಮಾನ ಪಡೆದರು. ಬಾಲಕಿಯರ ಖೋ–ಖೋ ವಿಭಾಗದಲ್ಲಿ ವಾಸವಿ ಶಾಲೆ ಪ್ರಥಮ, ಸಹ್ಯಾದ್ರಿ ಶಾಲೆ ದ್ವಿತೀಯ ಸ್ಥಾನಗಳಿಸಿದೆ.

25 ಶುದ್ಧ ಕುಡಿಯುವ ನೀರಿನ ಘಟಕಗಳ ನಿರ್ವಹಣೆ ಕ್ವಿಷ್ಟ್ ಮಿನರಲ್ ಕಂಪನಿಗೆ ಹಸ್ತಾಂತರ

» ಚಳ್ಳಕೆರೆ

ಚಳ್ಳಕೆರೆ ನಗರದ ವ್ಯಾಪ್ತಿಯ ಒಟ್ಟು 31 ವಾರ್ಡ್ ವ್ಯಾಪ್ತಿಯಲ್ಲಿ35ಕ್ಕೂಹೆಚ್ಚುಶುದ್ಧಕುಡಿಯುವನೀರಿನ ಘಟಕವನ್ನು ಸಾರ್ವಜನಿಕರಿಗೆ ಸಮರ್ಪಕವಾಗಿ ಕುಡಿಯುವನೀರುಸಿಗುಬೇಕುಎಂಬಉದ್ದೇಶದಿಂದ ಅಳವಡಿಸಲಾಗಿದೆ. ನಗರದ ಸುಮಾರು 25 ಘಟಕಗಳನ್ನು ಕಾರ್ಯನಿರ್ವಹಣೆಗಾಗಿ ದಾವಣಗೆರೆ ಕ್ವಿಷ್ಟ್ ಮಿನರಲ್ ಕಂಪನಿಗೆ ಟೆಂಡರ್ ಮೂಲಕ ನೀಡಲಾಗಿದೆ ಎಂದು ಪೌರಾಯುಕ್ತ ಸಿ.ಚಂದ್ರಪ್ಪ ತಿಳಿಸಿದರು. ಅವರು, ಈ ಬಗ್ಗೆ ಪತ್ರಿಕೆಗೆ ಮಾಹಿತಿ ನೀಡಿ ನಗರದ ನಾಲ್ಕನೇ ವಾರ್ಡ್ ವ್ಯಾಪ್ತಿಯ ಹಳೇ ಬಿಇಒ ಕಚೇರಿ ಬಳಿ ಇದ್ದ ಶುದ್ಧ ಕುಡಿಯುವ ನೀರಿನ ಘಟಕವನ್ನು ಕ್ವಿಷ್ಟ್ ಮಿನರಲ್ ಕಂಪನಿಯವರಿಗೆ ವರ್ಗಾವಣೆ ಮಾಡುವ ಸಂದರ್ಭದಲ್ಲಿ ಮಾತನಾಡಿದರು. ಈ ಸಂದರ್ಭದಲ್ಲಿ ಕೆ.ವಿನಯ್, ಲೋಕೇಶ್ ಮುಂತಾದವರು ಉಪಸ್ಥಿತರಿದ್ದರು.

ಪ್ರಮುಖ ಸುದ್ದಿ

ಗರ್ಭಿಣಿಯರು ಮಾಂಸಹಾರಿ ಊಟ ಸೇವಿಸಬೇಡಿ

» ನಾಯಕನಹಟ್ಟಿ

ಗರ್ಭಿಣಿಯರು ಮಾಂಸಹಾರಿ ಊಟ ಸೇವಿಸಬೇಡಿ ಸಸ್ಯಾಹಾರಿ ಊಟವನ್ನು ಮಾಡಬೇಕು ಎಂದು ನಾಯಕನಹಟ್ಟಿ ಪಟ್ಟಣ ಪಂಚಾಯಿತಿ 7ನೇ ವಾರ್ಡ್‌ನ ಸದಸ್ಯರಾದ ಸೈಯದ್ ಅನ್ವರ್ ಹೇಳಿದರು.

ನಾಯಕನಹಟ್ಟಿಪಟ್ಟಣಪಂಚಾಯಿತಿಯ ಸಭಾಂಗಣದಲ್ಲಿ ಇಲಾಖೆಯ ವತಿಯಿಂದ ನಡೆದ ಪೋಷಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು. ಗರ್ಭಿಣಿ ಸಮಯದಲ್ಲಿ ಹಸಿ ತರಕಾರಿ, ಮೊಳಕೆ ಕಾಳುಗಳನ್ನು ಮತ್ತು ಪೌಷ್ಟಿಕಾಂಶ ಹೊಂದಿರುವ ಆಹಾರವನ್ನು ಸೇವಿಸಿ ತಾವು ತಮ್ಮ ಗರ್ಭದಲ್ಲಿರುವ ಮಗುವನ್ನು ಪೋಷಣೆ ಮಾಡಬೇಕು ಎಂದು ಗರ್ಭಿಣಿಸ್ತ್ರೀಯರಿಗೆ ತಿಳಿಸಿದರು. ಗರ್ಭಿಣಿಯರು ನಿಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು ಮತ್ತು ನಿಮ್ಮ ಮಗುವನ್ನು ಸಂರಕ್ಷಿಸಬೇಕು ಅಂಗನವಾಡಿ ಕಾರ್ಯಕರ್ತೆಯರಿಗೆ ಮೊದಲು ಸಂಬಳ ಮಾಡಿ ಎಂದು ಮಹಿಳೆ ಮತ್ತು ಮಕ್ಕಳ ಕಲ್ಯಾಣ ಅಭಿವೃದ್ಧಿ ಇಲಾಖೆಯ ನಾಯಕನಹಟ್ಟಿ ವೃತ್ತ ಮೇಲ್ವಿಚಾರಕಿಯಾದ ನಾಗರತ್ನಮ್ಮರವರಿಗೆ ನೇರವಾಗಿ ಗುಡುಗಿದರು.

ಮತ್ತು ಮಕ್ಕಳ ಕಲ್ಯಾಣ ಅಭಿವೃದ್ಧಿ ಇಲಾಖೆಯ ನಾಯಕನಹಟ್ಟಿ ವೃತ್ತ ಮೇಲ್ವಿಚಾರಕಿಯಾದ ನಾಗರತ್ನಮ್ಮ ಮಾತನಾಡಿ ನಮ್ಮ ಮನೆಯಲ್ಲಿ ಇರುವ ಆಹಾರ ಪದ್ಧತಿಯಲ್ಲಿ ಅತಿ ಹೆಚ್ಚು ಪೋಷಕಾಂಶಗಳನ್ನು ಒಳಗೊಂಡಿರುವ ಸೊಪ್ಪು–ತರಕಾರಿ ಮೊಳಕೆ ಕಟ್ಟಿದ ಕಾಳು ಹಣ್ಣಯ, ಏಕದಳ, ದ್ವಿ–ದಳ ಧಾನ್ಯಗಳು ಮೊಟ್ಟೆ, ಹಾಲು, ಇನ್ನು ಇತ್ಯಾದಿ ಆಹಾರ ಪದಾರ್ಥಗಳನ್ನು ದಿನನಿತ್ಯದ ಆಹಾರದಲ್ಲಿ ಬಳಸುವುದರಿಂದ ಆರೋಗ್ಯವಂತರಾಗಬಹುದು. ಅಪೌಷ್ಟಿಕತೆ ಮಕ್ಕಳು ಹುಟ್ಟುವುದನ್ನು ತಡೆಗಟ್ಟಲು ಕಿಶೋರಿಯರನ್ನು ಗರ್ಭಿಣಿಯರನ್ನು ಅಪೌಷ್ಟಿಕತೆಯಿಂದ ರಕ್ಷಿಸುವುದೇ ಏಕೈಕ ಮಾರ್ಗ ಎಂದರು. ಕೇಂದ್ರ ಸರ್ಕಾರದ ಯೋಜನೆಗಳಲ್ಲಿ ಒಂದಾದ ಪೋಷಣೆ ಯೋಜನೆ 3 ವರ್ಷಗಳಿಂದ ಚಾಲ್ತಿಯಲ್ಲಿದೆ. ದೇಶದಲ್ಲಿ ಅತಿ ಹೆಚ್ಚು ಅಪೌಷ್ಟಿಕತೆಯಿಂದ ಬಳಲುತ್ತಿದ್ದ ರಾಜ್ಯ ರಾಜಸ್ಥಾನ್ ಈ ರಾಜ್ಯದಲ್ಲಿ ಅತಿ ಹೆಚ್ಚು ಪೌಷ್ಟಿಕತೆ ಕೊರತೆಯಿಂದ ಗರ್ಭಿಣಿಯರು ಮತ್ತು ಮಕ್ಕಳ ಸಾವು ಹೆಚ್ಚುತ್ತಿರುವುದರಿಂದ ಕಂಡು ಕೇಂದ್ರ ಸರ್ಕಾರ ಇಡೀ ದೇಶದಲ್ಲಿ ಪೋಷಣೆ ಕಾರ್ಯಕ್ರಮವನ್ನು ಜಾರಿಗೆ ತಂದು 3 ವರ್ಷಗಳು ಕಳೆದಿವೆ ಗರ್ಭಿಣಿಯರ, ಬಾಣಂತಿಯರ, ಕಿಶೋರಿಯರ ಮತ್ತು 6 ವರ್ಷಗಳ ಒಳಗಿನ ಮಕ್ಕಳ ಆರೋಗ್ಯ ರಕ್ಷಣೆಗಾಗಿರೂಪಿಸಿದಯೋಜನೆಯಾಗಿದೆ. ಜಿಲ್ಲೆಯಲ್ಲಿ ಅತಿ ಹೆಚ್ಚು ಕಡುಬಡತನ ಹೊಂದಿರುವ ಚಳ್ಳಕೆರೆ ತಾಲ್ಲೂಕು ಎಲ್ಲಾ ಅಂಗನವಾಡಿಗಳಲ್ಲಿ ಮೊಟ್ಟೆಯನ್ನು ನೀಡುತ್ತಾರೆ. ಕೆಲವು ಅಂಗನವ